# ಹಂಪಿ ಟೈಮ್ಸ್

HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY

ಸಂಪುಟ:01 Volume:01 • ಸಂಚಿಕೆ:178 Issue:178 • ನೋಂದಣಿ ನಂ.:KARKAN27911 Reg.No:KARKAN27911 • ವಿಜಯನಗರ VIJAYANAGARA • 08.12.2023 08.12.2023 • ಶುಕ್ರವಾರ Friday • ಪುಟ:04 Page:04 • ಬೆಲೆ:2 Rs:2







ಮೈಮೇಲೆ ಹರಿದ ಬಟ್ಟೆ ಇದ್ದರೂ ಚಿಂತೆಯಿಲ್ಲ. ಕೈಯಲ್ಲೊಂದು ಕನ್ನಡ ಪತ್ರಿಕೆ ಇರಲಿ.
ಡಿ.ವಿ.ಜಿ.


PLACE YOUR ADVT.
HOUSE RENT / SALE / LEASE, CHANGE OF NAME, OBITUARY, Public Notice & EVENT COVERAGE
Contact
9448633038
Near Valmiki Circle, HOSAPETE-583201
Email:hampitimes@gmail.com


# ಬ್ರ್ಯಾಂಡಿಂಗ್ ಹಂಪಿ ಸ್ಪರ್ಧೆ

## ಜಿಲ್ಲಾಧಿಕಾರಿ ದಿವಾಕರ್ ಹೇಳಿಕೆ | ಪ್ರವಾಸೋದ್ಯಮ ಉತ್ತೇಜನಕ್ಕೆ ವಿವಿಧ ಚಟುವಟಿಕೆ | ಹಂಪಿ ಅಭಿವೃದ್ಧಿಗೆ 70 ಕೋಟಿ ನಿಧಿ

## ನೋಂದಾಯಿಸಲು ಡಿ.21 ಮತ್ತು ಥೀಮ್ ಸಲ್ಲಿಸಲು ಡಿ.25 ಕೊನೆ ದಿನ | ಆಯ್ಕೆಯಾದವರಿಗೆ ನಗದು ಬಹುಮಾನ

**ಹಂಪಿ ಟೈಮ್ಸ್ ಹೊಸಪೇಟೆ**

ಸ್ವದೇಶ ದರ್ಶನ–2.0 ಅಡಿ ಹಂಪಿಯಲ್ಲಿ ಪ್ರವಾಸೋದ್ಯಮ ವನ್ನು ಉತ್ತೇಜಿಸಲು ಬ್ರಾಂಡಿಂಗ್ ಹಂಪಿ ಅಡಿಯಲ್ಲಿ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗುತ್ತಿದ್ದು, ಎಲ್ಲರಿಗೂ ಭಾಗವಹಿಸಲು ಭಾರತದಾದ್ಯಂತ ಅವಕಾಶ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ್ ಹೇಳಿದರು.

ಬ್ರಾಂಡಿಂಗ್ ಹಂಪಿ ಸ್ಪರ್ಧೆ–2023ರ ಕುರಿತು ಗುರುವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಹಮ್ಮಿಕೊಂಡಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಪ್ರವಾಸೋದ್ಯಮ ಸಚಿವಾಲಯವು ಸ್ವದೇಶ್ ದರ್ಶನ್ 2.0 ಯೋಜನೆಯಡಿ ಸಮಗ್ರ ಪ್ರವಾಸಿ ತಾಣವನ್ನು ಅಭಿವೃದ್ಧಿ ಪಡಿಸಲು ಕರ್ನಾಟಕದ ಹಂಪಿಯನ್ನು ಆಯ್ಕೆ ಮಾಡಿದ್ದು, ಇದು ಜನವರಿ 2023 ರಲ್ಲಿ ಪ್ರಾರಂಭಿಸಿ ಹಂಪಿ ಪ್ರವಾಸೋದ್ಯಮ ಅಭಿವೃದ್ಧಿಗೆ ರೂ. 70 ಕೋಟಿ ನಿಧಿಯನ್ನು ಕಾಯ್ದಿರಿಸಿದೆ. ಸ್ವದೇಶ್ ದರ್ಶನ 2.0 ಭಾಗವಾಗಿ ಪ್ರವಾಸೋದ್ಯಮವನ್ನು ಉತ್ತೇಜಿಸಲು ಹಂಪಿ ಸ್ಥಳ ಅಭಿವೃದ್ಧಿ ಚಟುವಟಿಕೆಗಳನ್ನು ಪ್ರಾರಂಭಿಸಲಾಗಿದೆ ಎಂದರು.



'ಹಂಪಿಯಲ್ಲಿ ಸಮಯ ಪ್ರಯಾಣ' ಎಂಬ ಥೀಮ್ ನೊಂದಿಗೆ 'ಹಂಪಿಯಲ್ಲಿ ಪ್ರವಾಸೋದ್ಯಮದ ಭವಿಷ್ಯವನ್ನು ರೂಪಿಸಲು ನಿಮ್ಮ ಅವಕಾಶ!' ಎಂಬ ಉದ್ದೇಶದಿಂದ ಲೋಗೋ ವಿನ್ಯಾಸ + ಆಕರ್ಷಕ ಟ್ಯಾಗ್ ಲೈನ್, ಆಕರ್ಷಕ ಮ್ಯಾಸ್ಕಾಟ್ ವಿನ್ಯಾಸ, ವಿಶಿಷ್ಟ ಸ್ಮರಣೆಗಳು, ಹಂಪಿಯಲ್ಲಿ ನಿಮ್ಮ ನೆಚ್ಚಿನ ಸ್ಥಳ ಅಥವಾ ಚಟುವಟಿಕೆಯನ್ನು ವಿವರಿಸುವ ಒಂದು ಬ್ಲಾಗ್, ಹಂಪಿಯನ್ನು ಹೆಚ್ಚು ಪ್ರತಿನಿಧಿಸುವ ಒಂದು ಫೋಟೋ ಸಲ್ಲಿಸುವ ಈ ಸ್ಪರ್ಧೆಗಳಲ್ಲಿ ಭಾರತದಾದ್ಯಂತ ವಿದ್ಯಾರ್ಥಿಗಳು, ಆಸಕ್ತ ಸಾರ್ವಜನಿಕರು ಭಾಗವಹಿಸಿ, ಬಹುಮಾನಗಳನ್ನು ಗೆಲ್ಲಲು ಮತ್ತು ನಿಮ್ಮ ಆಲೋಚನೆಗಳನ್ನು ಹಂಪಿಗೆ ತರಲು ಇದೊಂದು ಸುವರ್ಣಾವಕಾಶ ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕ ಅಧಿಕಾರಿ ಸದಾಶಿವ ಪ್ರಭು ಬಿ., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀಹರಿ ಬಾಬು ಬಿ.ಎಲ್., ಉಪವಿಭಾಗಾಧಿಕಾರಿ ಮಹ್ಮದ್‌ಅಲಿ ಅಕ್ರಮ ಷಾಹ, ಕಮಲಾಪುರ ಹೊಸಪೇಟೆ ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಪ್ರಭುಲಿಂಗ ತಳಿಕೇರಿ ಸೇರಿದಂತೆ ಮತ್ತಿತರರಿದ್ದರು.

### ಆಕರ್ಷಕ ಬಹುಮಾನ, ನೋಂದಣಿ

ಪ್ರತಿ ಪ್ಯಾಕೇಜ್‌ಗೆ ಪ್ರಥಮ 20,000 ರೂ., ದ್ವಿತೀಯ 10,000 ರೂ., ತೃತೀಯ 5,000 ರೂ. ನಗದು ಬಹುಮಾನ ನೀಡಲಾಗುವುದು. ಶಾರ್ಟ್‌ಲಿಸ್ಟ್ ಮಾಡಲಾದ ನಮೂದುಗಳು ತಮ್ಮ ಆಲೋಚನೆಗಳನ್ನು ಜಿಲ್ಲಾಧಿಕಾರಿಗಳಿಗೆ ಪ್ರಸ್ತುತ ಪಡಿಸಲು ಅವಕಾಶವನ್ನು ನೀಡುತ್ತವೆ. ವಿಜೇತ ನಮೂದುಗಳನ್ನು ಮತ್ತು ವಿಜಯನಗರ ಜಿಲ್ಲೆ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗುತ್ತದೆ. ನೋಂದಾಯಿಸಲು ಡಿ.21 ಮತ್ತು ಥೀಮ್ ಸಲ್ಲಿಸಲು ಡಿ.25 ಕೊನೆಯ ದಿನವಾಗಿದ್ದು, ನೋಂದಣಿ ಮತ್ತು ಪ್ರಶ್ನೆಗಳಿಗಾಗಿ competitions@karnatakatourism.orgಗೆ ಇಮೇಲ್ ಮಾಡಬಹುದು. ಹೆಚ್ಚಿನ ಮಾಹಿತಿಗಾಗಿ ವೆಬ್‌ಸೈಟ್https://vijayanagara.nic.in/ಗೆ ಭೇಟಿ ನೀಡಬಹುದು ಎಂದು ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

## ಮೈಕ್ರೋ ನ್ಯೂಸ್

### ಡಿ.10ರಂದು ಎಲ್ಲಾ ಇಲಾಖೆಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆ ಆಚರಿಸಿ

**ಹಂಪಿ ಟೈಮ್ಸ್ ಹೊಸಪೇಟೆ**

ಕರ್ನಾಟಕರಾಜ್ಯ ಮಾನವ ಹಕ್ಕುಗಳ ಆಯೋಗದ ನಿರ್ದೇಶನದಂತೆ, ಡಿ.10ರಂದು ಎಲ್ಲಾ ಇಲಾಖೆಗಳ ಕಚೇರಿಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನುಆಚರಿಸುವಂತೆಜಿಲ್ಲಾಧಿಕಾರಿಎಂ.ಎಸ್.ದಿವಾಕರ್‌ಅವರು ತಿಳಿಸಿದ್ದಾರೆ.

ಪ್ರತಿಜಿಲ್ಲೆಯಲ್ಲಿ ಮತ್ತುಜಿಲ್ಲೆಯತಾಲ್ಲೂಕು ಕೇಂದ್ರಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆಯನ್ನು ಪ್ರತೀ ವರ್ಷದಂತೆ ಈ ವರ್ಷವೂ ಸಹ ವಿಶೇಷವಾಗಿ ಮಾನವ ಹಕ್ಕುಗಳ ದಿನಾಚರಣೆಯನ್ನುಆಚರಿಸಲುರಾಜ್ಯ ಮಾನವ ಹಕ್ಕುಗಳ ಆಯೋಗವು ನಿರ್ಧಾರವನ್ನುಕೈಗೊಂಡಿದ್ದು,

ಡಿ.10ಕ್ಕೆ ಎಲ್ಲಾ ಇಲಾಖೆಗಳ ಕಚೇರಿಗಳಲ್ಲಿ ಮಾನವ ಹಕ್ಕುಗಳ ದಿನಾಚರಣೆ, ಪ್ರತಿಜ್ಞೆ ಸ್ವೀಕರಿಸಿ, ಈ ಕುರಿತು ಛಾಯಾಚಿತ್ರಗಳು ಮತ್ತು ವೀಡಿಯೊ ಕ್ಲಿಪ್ಪಿಂಗ್‌ಗಳ ಜೊತೆಗೆ ಆಯೋಗಕ್ಕೆ ಹಾಗೂ ಜಿಲ್ಲಾಧಿಕಾರಿ ಕಾರ್ಯಾಲಯಕ್ಕೆ ವರದಿಯನ್ನು ಸಲ್ಲಿಸಬೇಕು.

### ವಸತಿ ಶಾಲೆಗಳ 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲೆಯಲ್ಲಿನ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ವ್ಯಾಪ್ತಿಯಲ್ಲಿರುವ ವಸತಿ ಶಾಲೆಗಳಲ್ಲಿ 2024–25ನೇ ಶೈಕ್ಷಣಿಕ ಸಾಲಿನ 6ನೇ ತರಗತಿಗೆ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದಡಿ ಕಾರ್ಯ ನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ, ಕಿತ್ತೂರುರಾಣಿ ಚೆನ್ನಮ್ಮ, ಏಕಲವ್ಯ ಮಾದರಿ, ಅಟಲ್ ಬಿಹಾರಿ ವಾಜಪೇಯಿ, ಶ್ರೀಮತಿ ಇಂದಿರಾಗಾಂಧಿ, ಡಾ. ಬಿ.ಆರ್.ಅಂಬೇಡ್ಕರ್, ಮಾಸ್ತಿ ವೆಂಕಟೇಶ್‌ಅಯ್ಯಂಗಾರ್, ಸಂಗೊಳ್ಳಿ ರಾಯಣ್ಣ, ಕವಿರನ್ನ, ಗಾಂಧಿತತ್ವ, ಶ್ರೀ ನಾರಾಯಣಗುರು ಮುಂತಾದ ವಸತಿ ಶಾಲೆಗಳಿಗೆ 2024–25 ನೇ ಸಾಲಿಗೆ 6ನೇ ತರಗತಿ ಪ್ರವೇಶಕ್ಕೆಅಗತ್ಯವಾದ ಪ್ರವೇಶ ಪರೀಕ್ಷೆ ಮತ್ತುಆನ್‌ಲೈನ್‌ಕೌನ್ಸಿಲಿಂಗ್ ಅನ್ನುಕರ್ನಾಟಕ ಪರೀಕ್ಷಾ ಪ್ರಾಧಿಕಾರದ ವತಿಯಿಂದ ನಡೆಸಲಾಗುವುದು.

5ನೇ ತರಗತಿಯಲ್ಲಿ ವ್ಯಾಸಾಂಗ ಮಾಡುತ್ತಿರುವ ಅಭ್ಯರ್ಥಿಗಳ ಪೋಷಕರುತಮ್ಮ ಮಕ್ಕಳನ್ನು 6ನೇ ತರಗತಿಗೆಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳಲ್ಲಿನ ವಸತಿ ಶಾಲೆಗಳಿಗೆ ದಾಖಲಿಸಲು, ಡಿ.31 ರೊಳಗಾಗಿ ವಸತಿ ಶಾಲೆ, ಕಾಲೇಜುಗಳ ಮೂಲಕ ಆನ್‌ಲೈನ್‌ನಲ್ಲಿಣಣಠಿ://ಇಡಿಜ಼ು.ಇಚಿಡಿ.ಟುಭಿಎಟನಲ್ಲಿಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳಿಗೆ 100 ಅಂಕಗಳ ಪ್ರವೇಶ ಪರೀಕ್ಷೆಯನ್ನು 2024ರ ಫೆಬ್ರವರಿ 18ರಂದು ಬೆಳಿಗ್ಗೆ 11 ರಿಂದ ಮದ್ಯಾಹ್ನ 1 ಗಂಟೆಯವರೆಗೆ ನಡೆಯಲಿದೆ. ಹೆಚ್ಚಿನ ಮಾಹಿತಿಗಾಗಿ ವಿಜಯನಗರಜಿಲ್ಲಾ ವಸತಿ ಶಿಕ್ಷಣ ಸಂಸ್ಥೆಗಳ ಜಿಲ್ಲಾ ಸಮನ್ವಯಾಧಿಕಾರಿ ಶಾಂತಾಭಾಯಿ ಕೆ. ಹುಲ್ಯಾಳ್ ದೂರವಾಣಿ ಸಂಖ್ಯೆ 97414 54101, ಇವರನ್ನು ಸಂಪರ್ಕಿಸಬಹುದಾಗಿದೆಎಂದುಜಿಲ್ಲಾ ಸವ ಾಜಕಲ್ಯಾಣಇಲಾಖೆಯಉಪನಿರ್ದೇಶಕ ಮಂಜುನಾಥ ಹೆಚ್.ವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿಡಿಸಿಸಿ ಬ್ಯಾಂಕ್ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಅಂತಿಮ ನೋಟಿಸ್

**ಹಂಪಿ ಟೈಮ್ಸ್ ಹೊಸಪೇಟೆ**

ನಗರದ ಬಿಡಿಸಿಸಿ ಬ್ಯಾಂಕ್ ಆಡಳಿತ ಮಂಡಳಿಗೆ ಈಗಾಗಲೇ 14 ನಿರ್ದೇಶಕರು ಆಯ್ಕೆಯಾಗಿದ್ದು, ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಕೋರಂ ಕೊರತೆಯಿಂದ ಎರಡು ಬಾರಿ ಮುಂದೂಡಲಾಗಿದೆ. ಮುಂದೂಡಿದ ಪದಾಧಿಕಾರಿಗಳ ಅಂತಿಮ ಚುನಾವಣಾ ಸಭೆಯನ್ನು ಡಿ.15ರಂದು ಶುಕ್ರವಾರ ಮಧ್ಯಾಹ್ನ 2 ಗಂಟೆಗೆ ಬ್ಯಾಂಕಿನ ಕೇಂದ್ರ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದೆ ಎಂದು ರಿಟರ್ನಿಂಗ್ ಅಧಿಕಾರಿ ವಿಶ್ವಜೀತ ಮೆಹತಾ ತಿಳಿಸಿದ್ದಾರೆ.

ಈ ಹಿಂದೆ ನ.11 ಮತ್ತು ನ.18ರಂದು ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಗೆ ಸಭೆ ಕರೆಯಲಾಗಿತ್ತು. ಮೊದಲ ಸಭೆಗೆ ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರ ಸಲ್ಲಿಸಿದ್ದ ಕೂಡ್ಲಿಗಿ ಕೆ.ತಿಪ್ಪೇಸ್ವಾಮಿ ಬಣದ ಎಂಟು ನಿರ್ದೇಶಕರು ಹಾಜರಿದ್ದರು. ಆದರೆ ಅಧ್ಯಕ್ಷ ಸ್ಥಾನಕ್ಕೆ ನಾಮಪತ್ರಸಲ್ಲಿಸಿದ್ದ ಚೊಕ್ಕಬಸವನಗೌಡ ಬಣ ಅದೇ ಆಯ್ಕೆ ಸಭೆಗೆ ಗೈರಾಗಿದ್ದರು. ಕೋರಂ ಕೊರತೆಯಿಂದಾಗಿ ಅಧಿಕಾರಿಗಳು ಸಭೆ



ಮುಂದೂಡಿದ್ದರು. ಬಣಗಳ ತೆರೆಮರೆಯ ಕಸರತ್ತಿನಿಂದಾಗಿ ಅಧ್ಯಕ್ಷರ ಆಯ್ಕೆ ಚೆಂಡು ಸಿಎಂ ಅಂಗಳಕ್ಕೆ ಎಸೆಯಲಾಗಿತ್ತು. ನಂತರ ಸಹಕಾರಿ ಸಚಿವರ ಮೌಖಿಕ ಆಹ್ವಾನದ ಮೇರೆಗೆ ಬಿಡಿಸಿಸಿ ಬ್ಯಾಂಕ್ ನಿರ್ದೇಶಕರು ಬೆಂಗಳೂರಿಗೆ ತೆರಳಿದ್ದರಿಂದ ನ.18 ರಂದು ನಡೆದ ಆಯ್ಕೆ ಸಭೆಗೂ ಎಲ್ಲಾ ನಿರ್ದೇಶಕರು ಗೈರಾಗಿದ್ದರಿಂದ ಆಯ್ಕೆ ಸಭೆಯನ್ನು ಮತ್ತೊಮ್ಮೆ ಮುಂದೂಡಲಾಗಿತ್ತು. ಇದೀಗ ರಿಟರ್ನಿಂಗ್ ಅಧಿಕಾರಿ ಆಯ್ಕೆಗೆ ಅಂತಿಮ ನೋಟೀಸು ಜಾರಿ ಮಾಡದ್ದಾರೆ. ಈ ಹಿಂದೆ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳಲ್ಲೊಬ್ಬರನ್ನು ಬಹುಮತ ಆಧಾರದ ಮೇಲೆ ಅಥವಾ ಮತದಾನದ ಮೂಲಕ ಅಧ್ಯಕ್ಷರು, ಉಪಾಧ್ಯಕ್ಷರಾಗಿ ಆಯ್ಕೆ ಕಾರ್ಯ ನಡೆಯಲಿದೆ. ಕೆ.ತಿಪ್ಪೇಸ್ವಾಮಿ ಬಣದ ನಿರ್ದೇಶಕರು ಮೊದಲ ಸಭೆಗೆ ಹಾಜರಿದ್ದು, ಎರಡನೇ ಸಭೆಗೆ ಗೈರಾಗಿದ್ದರು. ಚೊಕ್ಕಬಸವನಗೌಡ ಬಣದ ನಿರ್ದೇಶಕರು ಎರಡು ಸಭೆಗೂ ಗೈರಾಗಿದ್ದರಿಂದ ನ.15ರ ಸಭೆಗೆ ಹಾಜರಾಗುವ ಅನಿವಾರ್ಯತೆ ಎದುರಾಗಿದೆ.

# ಪ್ರಜಾಪ್ರಭುತ್ವ ವ್ಯವಸ್ಥೆಗೆ ಕಳಸ ಸಂವಿಧಾನ

## ಡಿ ಎಸ್‌ಎಸ್ ಜಿಲ್ಲಾ ಅಧ್ಯಕ್ಷ ಬದ್ದಿ ಮರಿಸ್ವಾಮಿ ಅಭಿಮತ



**ಹಂಪಿ ಟೈಮ್ಸ್ ಕೊಟ್ಟೂರು**

ಜೀವನದುದ್ದಕ್ಕೂ, ಹೋರಾಟ, ಕಷ್ಟ ನೋವುಗಳನ್ನು ಕಂಡಂತ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಮಾಜದಲ್ಲಿನ ಕಟ್ಟಕಡೆಯ ವ್ಯಕ್ತಿಗೂ ಸ್ಥಾನಮಾನ ಮತ್ತು ನ್ಯಾಯ ದೊರೆಯಬೇಕೆಂದು ಅತ್ಯಂತ ಮಹತ್ವವುಳ್ಳ ಸಂವಿಧಾನವನ್ನು ನಮ್ಮ ದೇಶಕ್ಕೆ ಕೊಡುಗೆಯಾಗಿ ನೀಡಿದ್ದಾರೆ. ಪ್ರಜಾಪ್ರಭುತ್ವ ವ್ಯವಸ್ಥೆಗೆ ಇದು ಕಳಸ ವಿದ್ದಂತೆ ಎಂದು ಡಿ ಎಸ್‌ಎಸ್ ಜಿಲ್ಲಾ ಅಧ್ಯಕ್ಷ ಬದ್ದಿ ಮರಿಸ್ವಾಮಿ ಅಂಬೇಡ್ಕರ್ ಅವರ ಸಾದನೆಯನ್ನು ಸ್ಮರಿಸಿದರು.

ಪಟ್ಟಣದ ಅಂಬೇಡ್ಕರ್ ನಗರದ ಬಳಿ, ಅಂಬೇಡ್ಕರ್ ಅವರ 67 ನೇ "ಮಹಾ ಪರಿ ನಿರ್ವಾಹಣ ದಿನ" ಆಚರಣೆ ನಿಮಿತ್ತ ಗೌರವಾರ್ಥವಾಗಿ ಆಯೋಜಿಸಿದ ಕಾರ್ಯಕ್ರಮದಲ್ಲಿ ಅವರ ಭಾವ ಚಿತ್ರಕ್ಕೆ ಪೂಜೆಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಅಂಬೇಡ್ಕರ್ ಅವರಿಗೆ ನಮನ ಸಲ್ಲಿಸಿ ಮಾತನಾಡಿದರು.

> **ಎಲ್ಲಾ ಸಮುದಾಯದ, ಬಡವರು, ಶೋಷಿತ ವರ್ಗದವರು ಹಾಗೂ ಮಹಿಳೆಯರ ಪರ ಅಂಬೇಡ್ಕರ ಧ್ವನಿಯಾಗಿದ್ದಾರೆ**

ಅಂಬೇಡ್ಕರ್ ಒಂದು ಜಾತಿ, ಧರ್ಮಕ್ಕೆ ಸೀಮಿತ ವಲ್ಲ, ಎಲ್ಲಾ ಸಮುದಾಯದ, ಬಡವರು, ಶೋಷಿತ ವರ್ಗದವರು ಹಾಗೂ ಮಹಿಳೆಯರ ಪರ ಇವರು, ಇವರ ಸಿದ್ದಂತ ತಾರ್ಕಿಕವಾಗಿತ್ತು.ಈ ಹಿನ್ನೆಲೆ ಇವರ ಪುಣ್ಯ ಸ್ಮರಣೆ ದಿವಸ ದೇಶದ ಎಲ್ಲ ಸಮುದಾಯದವರು ದೀಪ ಬೆಳಗುವ ಮೂಲಕ ಇವರಿಗೆ ನಮನವನ್ನು ಸಲ್ಲಿಸಬೇಕೆಂದರು.

ಕೊಟ್ಟೂರಿನ ಸರ್ಕಾರಿ ಬಸ್ ನಿಲ್ದಾಣದ, ಮುಂಭಾಗದ ಸರ್ಕಲ್ ನಲ್ಲಿ ಅಂಬೇಡ್ಕರ್ ರವರ ಮೂರ್ತಿ ಪ್ರತಿಷ್ಠಾಪಿಸಿ, ಅಂಬೇಡ್ಕರ್ ಸರ್ಕಲ್ ಎಂದು ನಾಮಕರಣ ಮಾಡಬೇಕು ಎಂದು ದಲಿತ ಸಮುದಾಯದ ಪರ ಆಗ್ರಹಿಸಿದರು.

ಹನುಮಂತಪ್ಪ ವಕೀಲರು ಮಾತನಾಡಿ ಅಂಬೇಡ್ಕರ್ ಅವರು ಪರಿನಿರ್ವಾಣ ಹೊಂದಿದ್ದರು ಕೂಡ, ಅವರ ತತ್ವ ಸಿದ್ಧಾಂತಗಳು ಸೂರ್ಯ ಚಂದ್ರ ಇರುವವರೆಗೂ ಜೀವಂತವಾಗಿ ಇರುತ್ತವೆ, ಇದೇ ರೀತಿ ಅಂಬೇಡ್ಕರ್ ಅವರನ್ನು ಜೀವಂತವಾಗಿ ಉಳಿಸಿಕೊಳ್ಳಲು, ಪ್ರತಿಯೊಬ್ಬ ದಲಿತ ಮಕ್ಕಳು ಶಿಕ್ಷಣದಿಂದ ಜ್ಞಾನವನ್ನು ಸಂಪಾದಿಸುವ ಮೂಲಕ ಅವರ ಕೊಡುಗೆಗೆ ಅರ್ಥವನ್ನು ಕಲ್ಪಿಸಿಕೊಡುವಂತಾಗಬೇಕು ಎಂದು ಹೇಳಿದರು.

ಕಾರ್ಯಕ್ರಮಕ್ಕೂ ಮುನ್ನ ನೂರಾರು ಸಂಖ್ಯೆಯಲ್ಲಿ ಯುವಕರು ಹಾಗೂ ಮುಖಂಡರು ಮೇಣದ ಬತ್ತಿ ಹಿಡಿದು ಜಾಥ ಕೈಗೊಂಡು ಸರ್ಕಾರಿ ಬಸ್ ನಿಲ್ದಾಣದ ಮುಂಭಾಗ ಘೋಷಣೆ ಕೂಗುತ್ತ ಸಾಗಿ,ನಿಲ್ದಾಣದ ಸರ್ಕಲ್ ಸುತ್ತಲೂ ಮಾನವ ಸರಪಳಿ ನಿರ್ಮಿಸಿ ಸಂವಿಧಾನ ಪೀಠಕೆಯನ್ನು ಓದುವುದರ ಮೂಲಕ ಅಂಬೇಡ್ಕರ್ ಅವರ ಮಹಾ ಪರಿ ನಿರ್ವಾಹಣ ಅರ್ಥೈಸಿದರು.

ಈ ಸಂದರ್ಭದಲ್ಲಿ ಶಿಕ್ಷಕರು.ಟಿ.ಕೊಟ್ರೇಶ್, ಅಂಬೇಡ್ಕರ್ ಸಂಘದ ತಾಲೂಕು ಅಧ್ಯಕ್ಷ. ಬದ್ದಿ.ದುರುಗೇಶ್, ಡಿಎಸ್‌ಎಸ್ ಭೀಮವಾದ ಜಿಲ್ಲಾ ಸಂಚಾಲಕ,ರಾಂಪುರ ಸುರೇಶ, ಮಾಜಿ ಸೈನಿಕ ಅಜ್ಜಪ್ಪ, ಮೈಲಪ್ಪ, ಬದ್ದಿ. ದುರುಗೇಶಪ್ಪ, ಶ್ರೀನಿವಾಸ್, ಪಿ.ಚಂದ್ರಶೇಖರ್, ಕನ್ನಕಟ್ಟಿ ಭರ್ಮಪ್ಪ, ಬಣಕಾರ್ ಪರಶುರಾಮ್, ಎಲ್. ಕುಬೇರಪ್ಪ, ಕೊಲ್ಲಾರಪ್ಪ, ಮುಂತಾದ ದಲಿತ ಕಾಲೋನಿಯ ನೂರಾರು ಯುವಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.




## ವಚನ ಅರಿವು

### ತಿಳಿ

ತಿಳಿ ನೀರೆಂಬೆ ತಿಳಿ ನೀರೆಂಬೆ
ತಿಳಿ ನೀ ಎಂದು ಒಂದು ದಿನ ಅಂದಿಲ್ಲೆಲೆ ಮಾನವಾ.
ಕ್ಷಣಕ್ಕೆ ಕ್ಷಣಕ್ಕೆ ತಿಳಿ ನೀ ಎಂದಡೆ,
ತಳುಹದೆ ತನ್ನ ನಿಜವ ಕೊಡನೆ
ಕಪಿಲಸಿದ್ಧಮಲ್ಲೇಂದ್ರ?

– ಸಿದ್ಧರಾಮೇಶ್ವರ

ತಿಳಿಯಾದ, ಶುದ್ಧ ನೀರಿನಂತೆ ಮನಸ್ಸು ಇರಬೇಕು. ಜೀವನ ಪ್ರತಿ ಕ್ಷಣವು ತಿಳಿವಳಿಕೆಯನ್ನು ನೀಡುತ್ತದೆ. ಒಳ್ಳೆಯದನ್ನು ಪ್ರತಿ ಕ್ಷಣಕ್ಕೂ ತಿಳಿದುಕೊಂಡು ಅದರಂತೆ ನಡೆಯಬೇಕು. ನಡೆ–ನುಡಿಯಲ್ಲಿ ಶುದ್ಧವಾಗಿದ್ದರೆ ತಡಮಾಡದೆ ಶಿವನು ತನ್ನ ನಿಜ ಸ್ವರೂಪವನ್ನು, ಅರಿವಿನ ದಾರಿಯನ್ನು, ಆತ್ಮದಲ್ಲಿರುವ ಚೈತನ್ಯ ಸ್ವರೂಪವನ್ನು ತೋರುತ್ತಾನೆ.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

## ಅಲ್ಪಸಂಖ್ಯಾತ ಅಭಿವೃದ್ಧಿ ನಿಗಮ: ವಿವಿಧ ಯೋಜನೆಗಳಡಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಕೊಪ್ಪಳ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮವು 2023–24ನೇ ಸಾಲಿಗೆ ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧರು, ಸಿಖ್ಖರು ಮತ್ತು ಪಾರ್ಸಿ ಸಮುದಾಯದವರಿಗೆ ವಿವಿಧ ಯೋಜನೆಗಳಡಿ ಸೌಲಭ್ಯ ನೀಡಲಾಗುತ್ತಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.
ಸಮುದಾಯವದವರು ಕನಿಷ್ಠ 10 ವರ್ಷ ರಾಜ್ಯದಲ್ಲಿ ವಾಸವಾಗಿರಬೇಕು. 18 ರಿಂದ 55 ವರ್ಷ ವಯೋಮಿತಿಯುಳ್ಳ ಅರ್ಹ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು.

**ಸಾಂತ್ವನ ಯೋಜನೆ:** ಸಾಂತ್ವನ ಯೋಜನೆಯಡಿ ರಾಜ್ಯದಲ್ಲಿ ಗಲಭೆ ಮತ್ತು ಹಿಂಸಾಚಾರದ ಸಂದರ್ಭಗಳಲ್ಲಿ ಹಾಗೂ ಪರಿಸರ ವಿಕೋಪಗಳಿಂದ ವ್ಯಾಪಾರ ಕೇಂದ್ರಗಳು ಹಾಗೂ ವಾಸದ ಮನೆಗಳು ನಾಶ ಅಥವಾ ಹಾನಿಗೊಳಗಾಗಿದ್ದರೆ ಅಂತಹ ಪ್ರಕರಣಗಳಲ್ಲಿ ಕನಿಷ್ಠ ರೂ.2 ಲಕ್ಷ ನಷ್ಟವಾಗಿದ್ದರೆ ಸಾಲ ಸೌಲಭ್ಯ ಒದಗಿಸಲಾಗುವುದು. ಮೇಲ್ಕಂಡಂತೆ ಎರಡು ವರ್ಗಗಳ ರಾಜ್ಯದಲ್ಲಿನ ವಿಶೇಷ/ದುರ್ಬಲ ವರ್ಗದ ಫಲಾನುಭವಿಗಳಿಗೆ ಗರಿಷ್ಠ ರೂ.5 ಲಕ್ಷಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ಮತ್ತು ಶೇ.3 ರ ಬಡ್ಡಿದರದಲ್ಲಿ ಶೇ.50 ರಷ್ಟು ಸಾಲ ಒದಗಿಸಲಾಗುವುದು.
ಈ ಯೋಜನೆಯಡಿ ಅರ್ಜಿ ಸಲ್ಲಿಸಲು ಫಲಾನುಭವಿಗಳು ರಾಜ್ಯದ ಮತೀಯ ಅಲ್ಪಸಂಖ್ಯಾತರಾಗಿರಬೇಕು. ರಾಜ್ಯದ ಖಾಯಂ ನಿವಾಸಿಯಾಗಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ.8 ಲಕ್ಷ ಮೀರಿರಬಾರದು. ಸಂತ್ರಸ್ತರಾದ ಫಲಾನುಭವಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ವರದಿಯನ್ನು ಪಡೆದಿರಬೇಕು. ಅರ್ಜಿದಾರರ ಕುಟುಂಬದ ಸದಸ್ಯರಲ್ಲಿ ಯಾರೊಬ್ಬರೂ ಕೇಂದ್ರ ಅಥವಾ ರಾಜ್ಯ ಸರ್ಕಾರ ನೌಕರಿಯಲ್ಲಿರಬಾರದು. ಅರ್ಜಿದಾರರು ಅಥವಾ ಅವರ ಕುಟುಂಬದವರು ಕಳೆದ ಐದು ವರ್ಷಗಳಲ್ಲಿ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಲ್ಲಿ ಸಾಲ ಸೌಲಭ್ಯ ಪಡೆದಿರಬಾರದು (ಅರಿವು ಯೋಜನೆ ಹೊರತುಪಡಿಸಿ).

## ಮಕ್ಕಳು ಅರಸರಾಗಬೇಕೆ?

ಓದಲು ಸಮಯವಿಲ್ಲವೆಂದು ಪತ್ರಿಕೆಯನ್ನು ಕೈ ಬಿಡಬಾರದು, ಕನ್ನಡ ಪತ್ರಿಕೆಯೊಂದು ಕೈಯಲ್ಲಿಡಿದರೆ, ಹಿರಿಯರನ್ನು ಅನುಸರಿಸುವ ಮಕ್ಕಳು ಮೊಬೈಲ್ ಬಿಟ್ಟು ಅಕ್ಷರ ದಾಸರಾಗುತ್ತಾರೆ. ಅಕ್ಷರ ದಾಸರಾದರೆ ಅರಸರು ಆಗಬಲ್ಲರಲ್ಲವೇ ?

## ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಚೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ–ಮೇಲ್:hampitimes@gmail.com

# ಬಳಸುವ ವಸ್ತುಗಳು ಕೃತಕವಾಗಬಹುದು ಆದರೆ ಜೀವನ.....



ಶ್ರಾವಣ ಮಾಸದಲ್ಲಿ ಅನೇಕ ಹಬ್ಬಗಳು ಬರುತ್ತವೆ ಈ ಹಬ್ಬಗಳ ಆಚರಣೆಯಲ್ಲಿ ಅವುಗಳದೇ ಆದಂತಹ ವಿಶೇಷತೆ ಇದೆ. ಒಂದೊಂದು ಹಬ್ಬಕ್ಕೂ ಒಂದೊಂದು ರೀತಿಯಾದಂತಹ ಪೂಜೆಗಳನ್ನು ಮಾಡುತ್ತಾ ಅದಕ್ಕೆ ಸಂಬಂಧಪಟ್ಟ ಕಥೆಗಳು ಶ್ಲೋಕಗಳು ಮಂತ್ರಗಳು ವ್ರತಗಳನ್ನು ಆಚರಿಸುತ್ತಾರೆ. ಈ ರೀತಿ ಆಚರಣೆಗಳು ಇಂದು ನೆನ್ನೇಯದಲ್ಲ. ತಲತಲಾಂತರಗಳಿಂದ ಮಾಡುತ್ತಾ ಬಂದಿದ್ದಾರೆ. ಇದೇ ಸಮಯದಲ್ಲಿ ದೇವಿ ಪೂಜೆಗಾಗಿ ನಮ್ಮ ಪರಿಚಯದ ಮನೆಗೆ ಹೋಗಿದ್ದೆವುಅಲ್ಲಿ ನಾವು ನೋಡಿದ ಪೂಜೆ ಬಹಳ ವಿಶೇಷವಾಗಿತ್ತು. ಮನೆಯ ಬಾಗಿಲಿಗೆ ಕಟ್ಟಿದ್ದ ಮಾವಿನ ತೋರಣ ಮತ್ತು ಬಾಳೆ ಕಂಬಗಳು ಪ್ಲಾಸ್ಟಿಕ್ನದಾಗಿತ್ತು. ನೋಡಲು ನಿಜವಾದಂತಹ ಗಿಡಗಳಿಂದ ತಂದಂತದ್ದೇ ಎಂಬಂತೆ ಕಾಣುತ್ತಿತ್ತು. ಇದು ಈಗೆಲ್ಲಾ ಸರ್ವೇಸಾಮಾನ್ಯ ಅಂದುಕೊಂಡು ಒಳಗೆ ಹೋದೆವು. ಪೂಜೆ ಮಾಡಿದ ಟೇಬಲ್ ನ ಮೇಲೆ ಅನೇಕ ತರಹದ ಹೂಗಳು ಹಣ್ಣುಗಳನ್ನು ತುಂಬಿದ ತಟ್ಟೆಗಳು ಕಣ್ಣೀಗೆ ಬಿದ್ದವು. ಅವುಗಳನ್ನು ನೋಡಿದರೆ ಬಹಳ ತಾಜಾ ತಾಜಾ ಅಬ್ಬಾ ಎಷ್ಟೊಂದು ಚೆನ್ನಾಗಿ ಜೋಡಿಸಿದ್ದಾರಲ್ಲ ಎಂದೆನಿಸಿತು. ಹೂಗಳಂತೂ ನಾನಾ ಬಣ್ಣಗಳಿಂದ ನಮ್ಮ ಮನಸ್ಸನ್ನು ಸೆಳೆಯುವಂತೆ ಕಾಣುತ್ತಿದ್ದವು ನಮಗೆ ಅಲ್ಲಿರುವ ಎಲ್ಲಾ ವಸ್ತುಗಳನ್ನು ನೋಡಬೇಕೆಂಬ ಆಸೆಯಾಯಿತು ಹಾಗೆಯೇ ಹೂಗಳ ಸುವಾಸನೆಯನ್ನು ನೋಡಬೇಕೆಂದು ಬಯಸಿದೆವು ಹಾಗೆ ಹತ್ತಿರ ಹೋಗಿ ಮನೆಯವರು ನೋಡದಂತೆ ಅಲ್ಲಿದ್ದ ಹಣ್ಣುಗಳನ್ನು ಮುಟ್ಟಿದೆವು ಏನ್ ಆಶ್ಚರ್ಯ ಹಣ್ಣುಗಳೆಲ್ಲವೂ ಕಲ್ಲಿನಂತೆ ಗಟ್ಟಿಯಾಗಿದ್ದು ಕಂಡು ನಮಗೆ ಗಾಬರಿಯಾಯಿತು. ತಕ್ಷಣ ಒಂದೊಂದು ಹಣ್ಣನ್ನು ಎತ್ತಿಕೊಂಡು ನೋಡಿದರೆ ಅವು ಮಣ್ಣಿನಿಂದ ಮಾಡಿದ್ದ ಹಣ್ಣುಗಳಾಗಿದ್ದವು. ಇನ್ನು ತಟ್ಟೆಯಲ್ಲಿದ್ದ ಬಣ್ಣ ಬಣ್ಣದ ಹೂಗಳನ್ನು ನೋಡೋಣ ಎಂದು ಎಲ್ಲರೂ ಹೂವಿನ ತಟ್ಟೆಗೆ ಕೈ ಹಾಕಿದೆವು ಅದು ಇನ್ನೂ ಆಶ್ಚರ್ಯ ಉಂಟು ಮಾಡಿತು ಏಕೆಂದರೆ ಅಲ್ಲಿದ್ದ ಹೂವುಗಳೆಲ್ಲವೂ ಬರಿ ಪ್ಲಾಸ್ಟಿಕ್ ಪೇಪರ್ ಹೂಗಳಾಗಿದ್ದವು. ಮತ್ತೆ ದೇವರ ಪಕ್ಕದಲ್ಲಿ ಇಟ್ಟಿದ್ದ ಕಳಸದ ತೆಂಗಿನಕಾಯಿ ಕೂಡ ಬೆಳ್ಳಿಯ ತೆಂಗಿನಕಾಯಿ ಆಗಿತ್ತು ಪಕ್ಕದಲ್ಲಿದ್ದ ಬಾಳೆಹಣ್ಣಿನ ಗಿಡವನ್ನು ಇಟ್ಟಿದ್ದರು ಆಗಿಡವು ಪೂರ್ಣ ಬಂಗಾರದ್ದೆ ಆಗಿತ್ತು ಹಣ್ಣುಗಳು ಬಂಗಾರದಿಂದ ಕೂಡಿದ್ದವು. ಇದೇನಿದು ತೆಂಗಿನಕಾಯಿ ಒಡೆಯುವ ಆಗಿಲ್ಲ ತೀರ್ಥ ಪಡೆಯುವ ಆಗಿಲ್ಲ ಹಾಗೆಯೇ ಬಾಳೆಹಣ್ಣು ಮುರಿಯುವ ಆಗಿಲ್ಲ ಎಡೆ ಮಾಡುವ ಆಗಿಲ್ಲ ಇದನ್ನು ನೋಡಿ ನಮಗೆ ಮನೆಯವರನ್ನು ಕೇಳೋಣ ಯಾಕೆ ಈ ರೀತಿ ಪೂಜೆ ಮಾಡಿದ್ದೀರಿ ಎಂದೆನಿಸಿತು ಆದರೆ ಕಾದು ನೋಡೋಣ. ನಮಗೆ ಹುಡಿ ತುಂಬುವಾಗ ಯಾವ ಹಣ್ಣುಗಳನ್ನು ಇಡುತ್ತಾರೆ ಎಂದು ಯೋಚಿಸಿ ಸುಮ್ಮನಾದೆವು. ಸ್ವಲ್ಪ ಹೊತ್ತು ಕಳೆದ ಮೇಲೆ ಮನೆಯವರು ಎಲ್ಲರಿಗೂ ಅರಿಶಿನ ಕುಂಕುಮ ಕೊಟ್ಟು ಎಲೆ ಅಡಿಕೆ ಹಣ್ಣನ್ನು ಇಟ್ಟು ಹುಡಿ ತುಂಬಿದರು ನಮ್ಮ ಪುಣ್ಯಕ್ಕೆ ಹುಡಿಗೆ ಇಟ್ಟಿದ್ದ ಎಲ್ಲವೂ ಕೂಡ ನಿಜವಾದವೇ ಆಗಿದ್ದವು. ನಮ್ಮ ಮುಖದಲ್ಲಿರುವ ಪ್ರಶ್ನೆಗಳನ್ನು ಗಮನಿಸಿ ಮನೆಯವರು ಕೇಳಿದರು. ಯಾಕೆ ಈ ರೀತಿ ನಾವು ಪೂಜೆ ಮಾಡಿದ್ದೇವೆ ಎಂದು ನಿಮಗೆ ಅನಿಸಿರಬೇಕಲ್ಲವೇ.ನಮ್ಮ ಮಕ್ಕಳು ನಾನು ಅಂಗಡಿಗೆ ಹೋಗಿ ಪ್ರತಿ ಬಾರಿ ಇವೆಲ್ಲಾ ತರುವ ಬದಲು ಒಂದು ಸಲ ತಂದು ಇಟ್ಟುಕೊಂಡಿರಿ ಪ್ರತಿ ಬಾರಿ ಪೂಜೆಗೆ ಇವುಗಳನ್ನೇ ಇಡಿ ನಿಮಗೂ ಕೆಲಸ ಕಡಿಮೆ ಆಗುತ್ತದೆ.ಅಲ್ಲದೆ ದೇವರಿಗೆ ಭಕ್ತಿ ಮುಖ್ಯವೇ ಹೊರತು ನಾವಿಟ್ಟಂತಹ ವಸ್ತುಗಳು ಮುಖ್ಯವಲ್ಲ ಎಂದು ಬಹಳ ಸರಳವಾಗಿ ಹೇಳಿದರು. ಸರಿ ಅವರ ಮಾತನ್ನು ಕೇಳಿಕೊಂಡು ನಾವು ಅಲ್ಲಿಂದ ಹೊರಟೆವು ದಾರಿಯುದ್ದಕ್ಕೂ ಈ ಪೂಜೆಗೆ ಸಂಬಂಧಪಟ್ಟಂತ ಅನೇಕ ಪ್ರಶ್ನೆಗಳ ಸರಮಾಲೆಗಳು ಬರಲು ಶುರುವಾಯಿತು.

ಹಿಂದೆಲ್ಲಾ ನಮ್ಮ ಹಿರಿಯರು ಹಬ್ಬಗಳು ಬಂತೆಂದರೆ ಎರಡು ಮೂರು ದಿನಗಳ ಮುಂಚೆಯೇ ಮನೆಗಳನ್ನು ಸ್ವಚ್ಚಗೊಳಿಸಿ ಹೂವು ಹಣ್ಣು ಕಾಯಿ ಮಾವಿನ ಸೊಪ್ಪು ಬಾಳೆಕಂಬ ಎಲ್ಲಾ ತಯಾರಿಯನ್ನು ಮಾಡಿಕೊಳ್ಳುತ್ತಿದ್ದರು. ಇಲ್ಲಿ ಕೆಲಸ ಕಡಿಮೆಯಾಗಲೆಂದು ಈ ರೀತಿ ಪೂಜೆಯನ್ನು ಮಾಡಿರಬಹುದು ಆದರೆ ಹಿರಿಯರು ಮಾಡುತ್ತಿದ್ದ ಪೂಜೆಯಲ್ಲಿ ನೈಜತೆ ಇರುತ್ತಿತ್ತು ಹಾಗೂ ಅದಕ್ಕೆ ತನ್ನದೇ ಆದ ವಿಶೇಷತೆಯಿತ್ತು. ಮುಂಚೆಯೇ ತಂದಿಡುತ್ತಿದ್ದ ಮಾವಿನ ಸೊಪ್ಪಿನ ವಾಸನೆ ವಿಧವಿಧ ಹೂಗಳಲ್ಲಿನ ಸುವಾಸನೆ ಹಣ್ಣುಗಳಲ್ಲಿನ ರುಚಿ ಸವಿಯ ಆನಂದ ಇವು ಕಾಣದಾಯಿತಲ್ಲ? ಅಲ್ಲದೇ ದೀಪದಲ್ಲಿ ಹಾಕುತ್ತಿದ್ದ ಎಣ್ಣೆ ಮತ್ತು ಬತ್ತಿಗಳಿಂದ ಬೆಳಗುವ ಬೆಳಕು ಜೀವನದ ಮೌಲ್ಯಗಳನ್ನು ತಿಳಿಸುತ್ತಿದ್ದವು ಅಲ್ಲದೆ ತೆಂಗಿನಕಾಯಿ ಬಾಳೆಹಣ್ಣು ಯಾರೂ ಎಂಜಲು ಮಾಡದ ಹಣ್ಣು ಕಾಯಿಗಳು ದೇವರಿಗೆ ಶ್ರೇಷ್ಠ ಎನ್ನುತ್ತಿದ್ದರು. ಇಂತಹ ಆಚರಣೆಗಳಿಂದ ಮನೆ ಮಂದಿಗಳಲ್ಲಿ ಶಾಂತಿ ಸಮಾಧಾನ ತನಗೆ ತಾನೇ ಬರುತ್ತಿತ್ತು. ಈಗಿನ ವಿದ್ಯುತ್ ದೀಪಗಳು ಹೆಚ್ಚಿನ ಬೆಳಕನ್ನು ಕೊಡಬಲ್ಲವು ಆದರೆ ಎಣ್ಣೆ ಬತ್ತಿಗಳಿಂದ ಹಚ್ಚಿದ ದೀಪದ ಶಾಂತತೆ ಅವುಗಳನ್ನು ಆರಿಸದೆ ನೋಡಿಕೊಳ್ಳುವ ಮನೆಯವರ ಸಮಾಧಾನವನ್ನು ಹೆಚ್ಚಿಸುವಂತಹದು ಆಗಿದ್ದವು. ಆತ್ಮೀಯರೇ ನಮ್ಮ ಮುಂದಿನ ಪೀಳಿಗೆಗೆ ನಾವು ಯಾವುದೇ ಹಬ್ಬಗಳನ್ನು ಆಚರಿಸುವ ನಿಜವಾದ ಉದ್ದೇಶಗಳನ್ನು ಖಂಡಿತಾ ತಿಳಿಸಿ ಅದರಲ್ಲಿ ಹೊಂದಾಣಿಕೆಯ ಮತ್ತು ಕೂಡಿಬಾಳುವುದರ ಮಹತ್ವ ತಿಳಿಸಿ ಹಾಗೆಯೇ ಎಲ್ಲರನ್ನು ಪ್ರೀತಿಯಿಂದ ಕಾಣಿರಿ ಪ್ರತಿಯೊಂದು ಆಚರಣೆಯಲ್ಲಿನ ಉದ್ದೇಶ ತಿಳಿಸುತ್ತಾ ಇವುಗಳನ್ನು ನೈಜತೆಯ ಸನ್ನಿವೇಶಕ್ಕೆ ತಕ್ಕಂತೆ ಅಭ್ಯಾಸಗಳನ್ನು ಮಾಡಿಸೋಣ, ಬೆಳೆಸೋಣ ಉಳಿಸೋಣ......





**– ಜಿ ಆರ್ ಬಸವರಾಜೇಶ್ವರಿ**
ಸರ್ಕಾರಿ ಪ್ರೌಢಶಾಲೆ ಹಗರಿಗಜಾಪುರ

## ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆಯಡಿ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**

ಪ್ರಸ್ತಕ ಸಾಲಿನಲ್ಲಿ ಫಲಾನುಭವಿ ಆಧಾರಿತ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯ ವಿವಿಧ ಘಟಕಗಳಿಗೆ ಸಹಾಯಧನ ಪಡೆಯಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.
ಈ ಯೋಜನೆಯಡಿ ಹೊಸ ಪಾಲನೆ ಕೊಳಗಳ ನಿರ್ಮಾಣ (ನರ್ಸರಿ/ಮೀನುಮರಿ ಪಾಲನೆ ಕೊಳಗಳು), ಲವಣ/ಕ್ಷಾರಿಯ ಪ್ರದೇಶಗಳಿಗೆ ಹೊಸ ಕೊಳಗಳ ನಿರ್ಮಾಣ ಮತ್ತು ಹೂಡಿಕೆ ವೆಚ್ಚ ಹೊಸ ಮೀನುಕೃಷಿ ಕೊಳಗಳ ನಿರ್ಮಾಣ, ಮತ್ತು ಸಮಗ್ರ ಮೀನುಕೃಷಿ ಸ್ಕ್ಯಾಂಪಿ, ಪಂಗಾಸಿಯಸ್, ತಿಲಾಪಿಯ ಸೇರಿದಂತೆ ಸಿಹಿ ನೀರಿನ ಜಲಕೃಷಿಗೆ ಹೂಡಿಕೆ ವೆಚ್ಚಗಳು, ಐಸ್ ಬಾಕ್ಸ್‌ನೊಂದಿಗೆ ಮೋಟಾರ್ ಸೈಕಲ್ ಮೀನು ಮಾರಾಟಕ್ಕಾಗಿ ಐಸ್ ಬಾಕ್ಸ್ ಹೊಂದಿರುವ ತ್ರಿಚಕ್ರ, ಅಲಂಕಾರಿಕ ಮೀನುಗಳ ಕಿಯೋಸ್ಕ್ ಸೇರಿದಂತೆ ಮೀನು ಕಿಯೋಸ್ಕ್ ನಿರ್ಮಾಣ, ಸಾಂಪ್ರಾದಾಯಕ ಮೀನುಗಾರರಿಗೆ ಎಫ್‌ಆರ್‌ಪಿ ಬೋಟ್ ಮತ್ತು ಬಲೆಗಳನ್ನು ಖರೀದಿಸಲು ಬ್ಯಾಕ್ಯಾರ್ಡ ಮಿನಿ ಆರ್.ಎ.ಎಸ್ ಹಾಗೂ ವಿವಿಧ ಘಟಕಗಳಿಗೆ ಸಹಾಯಧನ ನೀಡಲು ಆಸಕ್ತಿ ಹೊಂದಿರುವ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದಾಗಿದೆ.
ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಗೂ ಮಹಿಳಾ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.60ರಷ್ಟು ಹಾಗೂ ಸಾಮಾನ್ಯ ವರ್ಗದ ಫಲಾನುಭವಿಗಳಿಗೆ ಘಟಕ ವೆಚ್ಚದ ಶೇ.40 ರಂತೆ ಸಹಾಯಧನ ನೀಡಲಾಗುವುದು. ಅರ್ಜಿ ಸಲ್ಲಿಸಲು ಡಿ.16 ಕೊನೆಯ ದಿನವಾಗಿದ್ದು, ಅರ್ಜಿಗಳನ್ನು ಸಂಬಂಧಿಸಿದ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೂ ಸಲ್ಲಿಸಬಹುದಾಗಿದೆ.
ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಉಪ ನಿರ್ದೇಶಕರ ಕಚೇರಿ ಹಾಗೂ ಮೊ.9449593156, ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ ಬಳ್ಳಾರಿ, ಸಿರುಗುಪ್ಪ, ಕುರುಗೋಡು, ಕಂಪ್ಲಿ ಮೊ.8970754167 ಮತ್ತು ಸಂಡೂರು ಮೊ.9620177588 ಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತ ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಹಂಪಿ ಟೈಮ್ಸ್ ಕೊಪ್ಪಳ**

2023–24ನೇ ಸಾಲಿಗಾಗಿ ಮೆಟ್ರಿಕ್ ನಂತರದ ಕೋರ್ಸುಗಳಿಗೆ ಕೊಪ್ಪಳ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕ/ಬಾಲಕಿಯರ ವಸತಿ ನಿಲಯಗಳ ಪ್ರವೇಶಕ್ಕಾಗಿ ಖಊಊಕ (State Hostel Portal) ಆನ್–ಲೈನ್ ಮೂಲಕ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಪೋಷಕರು/ವಿದ್ಯಾರ್ಥಿಗಳು ವೆಬ್‌ಸೈಟ್ ವಿಳಾಸ https://shp.karnataka.gov.in/ ಮೂಲಕ ಅರ್ಜಿ ಸಲ್ಲಿಸಲು ಡಿಸೆಂಬರ್ 15 ರವರೆಗೆ ದಿನಾಂಕ ವಿಸ್ತರಿಸಲಾಗಿದೆ.

ಕೊಪ್ಪಳ ನಗರದ ವಿಜಯನಗರ ಬಡಾವಣೆಯಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವಸತಿ ನಿಲಯದ ಸಂಕೇತ: ಎಂಡಬ್ಲ್ಯೂಡಿ208), ಗಣೇಶ ತೆಗ್ಗು, ಕೊಪ್ಪಳ–01 ದ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ209), ಕೊಪ್ಪಳ–02 (ಮೇಲ್ದರ್ಜೆಗೇರಿಸಿದ) ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ210), ಬಿಲಾಲ ನಗರದ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ207), ಆರೋಗ್ಯ ಬಡಾವಣೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ206), ಗಂಗಾವತಿ ನಗರದ ಗಂಗಾವತಿ–01 ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ199), ಉಪ್ಪಾರ ಓಣಿಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ (ವ.ನಿ.ಸಂ: ಎಂಡಬ್ಲ್ಯೂಡಿ202), ಗಂಗಾವತಿ–02 (ಮೇಲ್ದರ್ಜೆಗೇರಿಸಿದ) ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ200), ಕುಷ್ಟಗಿಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ204), ಕಾರಟಗಿಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ(ವ.ನಿ.ಸಂ: ಎಂಡಬ್ಲ್ಯೂಡಿ205), ಯಲಬುರ್ಗಾದ ಹುಡ್ಕೊ ಕಾಲೋನಿಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯ (ವ.ನಿ.ಸಂ: ಎಂಡಬ್ಲ್ಯೂಡಿ211) ವಸತಿ ನಿಲಯಗಳಿಗೆ ಅರ್ಹ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದು.

2023–24ನೇ ಶೈಕ್ಷಣಿಕ ಸಾಲಿಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿದ್ಯಾಸಿರಿ ಯೋಜನೆಯನ್ನು ಎಸ್.ಎಚ್.ಪಿ ತಂತ್ರಾಂಶದ ಮೂಲಕವೇ ಅನುಷ್ಠಾನಗೊಳಿಸಲಾಗುತ್ತದೆ. ಈ ಯೋಜನೆಗೆ ರಾಜ್ಯ ವಿದ್ಯಾರ್ಥಿನಿಲಯ ತಂತ್ರಾಂಶದಲ್ಲಿ (ಎಸ್.ಎಚ್.ಪಿ) ಅರ್ಜಿ ಹಾಕಿ ವಿದ್ಯಾರ್ಥಿನಿಲಯಗಳಲ್ಲಿ ಸೀಟು ಲಭ್ಯವಾಗದಿರುವ ವಿದ್ಯಾರ್ಥಿಗಳು ಮಾತ್ರ ಅರ್ಹರಾಗುತ್ತಾರೆ. ವಿದ್ಯಾಸಿರಿ ಯೋಜನೆಗಾಗಿ ಪ್ರತ್ಯೇಕವಾಗಿ ಅರ್ಜಿಗಳನ್ನು ಅಹ್ವಾನಿಸುವುದಿಲ್ಲ.

ಅರ್ಜಿ ಸಲ್ಲಿಸಲು ವಿದ್ಯಾರ್ಥಿಗಳು ಸರ್ಕಾರಿ ಅಥವಾ ಅಂಗೀಕೃತ ಕಾಲೇಜುಗಳಲ್ಲಿ ಮೆಟ್ರಿಕ್ ನಂತರದ ತರಗತಿಗಳಲ್ಲಿ ಅಭ್ಯಾಸ ಮಾಡುತ್ತಿರಬೇಕು. ವಸತಿ ನಿಲಯಗಳಲ್ಲಿ ಶೇ.75 ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು ಶೇ.25 ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ಅಲ್ಪಸಂಖ್ಯಾತರ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ. ಗಳಿಗಿಂತ ಮೀರಿರಬಾರದು. ಹಿಂದುಳಿದ ವರ್ಗಗಳಾದ 2ಎ, 2ಬಿ, 3ಎ, 3ಬಿ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಪ್ರವರ್ಗ–1 ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 1.00 ಲಕ್ಷ ರೂ.ಗಳಿಗಿಂತ ಮೀರಿರಬಾರದು, ಪರಿಶಿಷ್ಟ ಜಾತಿ & ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು.
ಅರ್ಜಿಯೊಂದಿಗೆ ತಹಶೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ ಕಾರ್ಡ್, ಅಂಕಪಟ್ಟಿ ಹಾಗೂ ವಿದ್ಯಾರ್ಥಿಯ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಿಗದಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಕೊಪ್ಪಳ –08539–225070, ಜಿಲ್ಲಾ ಮತ್ತು ತಾಲ್ಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಹಾಗೂ ಹತ್ತಿರದ ವಸತಿ ನಿಲಯಗಳಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆರಿಗೆ ವೇಳೆ ತಾಯಂದಿರ ಮರಣ ತಪ್ಪಿಸಿ

## ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿಕೆ | ಹೆಚ್ಚಿನ ವೈದ್ಯಕೀಯ ಚಿಕಿತ್ಸೆಯ ಅಗತ್ಯವಿದ್ದಲ್ಲಿ ಸೌಲಭ್ಯ ಹೊಂದಿರುವ ಆಸ್ಪತ್ರೆಗೆ ಶಿಫಾರಸ್ಸು ಮಾಡಬೇಕು

■ **ಹಂಪಿ ಟೈಮ್ಸ್ ಕೊಪ್ಪಳ**

ಹೆರಿಗೆ ಸಮಯದಲ್ಲಿ ಅಧಿಕ ರಕ್ತಸ್ರಾವ, ರಕ್ತದೊತ್ತಡದ ಏರಿಳಿತ ಮುಂತಾದ ಸಮಸ್ಯೆಗಳಿಂದ ಮಹಿಳೆಯರು ಮರಣ ಹೊಂದುತ್ತಾರೆ. ಇದನ್ನು ತಪ್ಪಿಸಲು ಮುಂಜಾಗ್ರತಾ ಕ್ರಮವಾಗಿ ಎಲ್ಲ ರೀತಿಯ ಅಗತ್ಯ ವೈದ್ಯಕೀಯ ವ್ಯವಸ್ಥೆಗಳನ್ನು ಸಿದ್ದಪಡಿಸಿಕೊಳ್ಳಬೇಕು. ಹೆಚ್ಚಿನ ವೈದ್ಯಕೀಯ ಚಿಕಿತ್ಸೆಯ ಅಗತ್ಯವಿದ್ದಲ್ಲಿ ಸುಸಜ್ಜಿತ ಸೌಲಭ್ಯ ಹೊಂದಿರುವ ಆಸ್ಪತ್ರೆಗೆ ಶಿಫಾರಸ್ಸು ಮಾಡಬೇಕು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಅವರು ವೈದ್ಯಾಧಿಕಾರಿಗಳಿಗೆ ಸೂಚಿಸಿದರು.

ಬುಧವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಆರೋಗ್ಯ ಕಾರ್ಯಕ್ರಮಗಳ ಜಿಲ್ಲಾ ಮಟ್ಟದ ಸಮನ್ವಯ ಹಾಗೂ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ವೈದ್ಯಕೀಯ ವಿಜ್ಞಾನ ಕಾಲೇಜು ಹಾಗೂ ಆಸ್ಪತ್ರೆಯಲ್ಲಿ ಆಧುನಿಕ ವೈದ್ಯಕೀಯ ಸವಲತ್ತುಗಳು ಲಭ್ಯವಿದ್ದು, ತುರ್ತು ಸಂದರ್ಭದಲ್ಲಿ ಮಹಿಳೆಯರನ್ನು ಕಿಮ್ಸ್‌ಗೆ ಹೋಗುವಂತೆ ಅಥವಾ ಹತ್ತಿರದ ಉತ್ತಮ ವೈದ್ಯಕೀಯ ಸೌಲಭ್ಯ ಹೊಂದಿರುವ ಆಸ್ಪತ್ರೆಗೆ ತೆರಳುವಂತೆ ಕುಟುಂಬಸ್ಥರಿಗೆ ಶಿಫಾರಸ್ಸು ಮಾಡಬೇಕು. ತುರ್ತು ಸಂದರ್ಭದಲ್ಲಿ ದೊರೆಯುವ ಚಿಕಿತ್ಸೆಯಿಂದ ಹೆರಿಗೆ ಸಮಯದಲ್ಲಿ ಮಹಿಳೆಯ ಪ್ರಾಣವನ್ನು ಉಳಿಸಬಹುದು. ಹೆರಿಗೆಗೆ ದಾಖಲಾದ ಪ್ರತಿ ಮಹಿಳೆಯ ಆರೋಗ್ಯವನ್ನು ಫಿಜಿಶಿಯನ್‌ಗಳಿಂದ ತಪಾಸಣೆ ಮಾಡಿಸಬೇಕು. ಗರ್ಭಿಣಿ ಮಹಿಳೆಯ ಹಿಂದಿನ ಹೆರಿಗೆಗಳು ಹಾಗೂ ಪ್ರಸ್ತುತ ಗರ್ಭ ಧರಿಸಿದ ಸಂದರ್ಭದಲ್ಲಿನ ವೈದ್ಯಕೀಯ ಇತಿಹಾಸದ ದಾಖಲೆಗಳನ್ನು ಪರಿಶೀಲಿಸಿ ಅದಕ್ಕೆ ತಕ್ಕಂತೆ ಮಹಿಳೆಯ ಹೆರಿಗೆಗೆ ಬೇಕಾದ ಅಗತ್ಯ ವೈದ್ಯಕೀಯ ಸಿದ್ಧತೆ ಮಾಡಿಕೊಳ್ಳಬೇಕು. ಮಹಿಳೆಯರಲ್ಲಿ ಸಾಮಾನ್ಯವಾಗಿ ರಕ್ತ ಹೀನತೆ ಪ್ರಮುಖ ಸಮಸ್ಯೆಯಾಗಿರುತ್ತದೆ. ಅದಕ್ಕಾಗಿ ಗರ್ಭಿಣಿ ಮಹಿಳೆಯರು ಪೌಷ್ಠಿಕ ಆಹಾರ, ಅಗತ್ಯ ವೈದ್ಯಕೀಯ ನೆರವು ಪಡೆಯುವಂತೆ ಗರ್ಭಿಣಿ ಮಹಿಳೆ ಹಾಗೂ ಆಕೆಯ ಕುಟುಂಬಸ್ಥರಿಗೆ ಆಶಾ ಅವರಿಂದ ಸೂಕ್ತ ತಿಳುವಳಿಕೆ ನೀಡಬೇಕು. ರಕ್ತದೊತ್ತಡವನ್ನು ನಿಯಂತ್ರಣದಲ್ಲಿಡಲು ಸಲಹೆ ನೀಡಬೇಕು. ಇದರಿಂದ ಹೆರಿಗೆ ಸಂದರ್ಭದಲ್ಲಿ ಉಂಟಾಗುವ ತಾಯಂದಿರ



ಮರಣವನ್ನು ತಪ್ಪಿಸಬಹುದು. ಪಕ್ಕದ ಅಥವಾ ಬೇರೆ ಜಿಲ್ಲೆಗಳಿಂದ ಕೊನೆಯ ಹಂತದಲ್ಲಿರುವ ರೋಗಿಗಳನ್ನು, ಹೆರಿಗೆಗೆ ಗರ್ಭಿಣಿಯರನ್ನು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಿ ಕಳುಹಿಸುತ್ತಾರೆ. ಹೀಗೆ ಕಳುಹಿಸುವಾಗ ಗರ್ಭಿಣಿಯ ಜೊತೆ ಸಂಬಂಧಿಸಿದ ಆಶಾ ಅವರು ಇರುವುದು ಕಡ್ಡಾಯ. ಈ ಬಗ್ಗೆ ಪಕ್ಕದ ಜಿಲ್ಲೆಯ ಆರೋಗ್ಯ ಇಲಾಖೆಗೆ ಸೂಕ್ತ ಮಾಹಿತಿ ನೀಡಿ ಎಂದು ಅವರು ಹೇಳಿದರು.

ತುರ್ತು ಸಂದರ್ಭದಲ್ಲಿ ಆರೋಗ್ಯ ಇಲಾಖೆಯ 108 ಅಂಬ್ಯುಲೆನ್ಸ್‌ಗಳನ್ನು ರೋಗಿಗಳು ಬಳಸಿಕೊಳ್ಳಬಹುದು. ಈ ಸಮಯದಲ್ಲಿ ಹತ್ತಿರದ ಆಸ್ಪತ್ರೆಗೆ ರೋಗಿಯನ್ನು ಕರೆದೊಯ್ಯಬೇಕು ಎಂಬ ನಿಯಮವಿದೆ. ಆದರೆ ರೋಗಿ ಅಥವಾ ರೋಗಿಯ ಕುಟುಂಬಸ್ಥರು ಬಯಸಿದಲ್ಲಿ ಅವರು ಸೂಚಿಸುವ ಯಾವುದೇ ಆಸ್ಪತ್ರೆಗೆ ರೋಗಿಯನ್ನು ಕರೆದೊಯ್ಯಬೇಕು. ಈ ಕುರಿತು ರೋಗಿಯ ಕುಟುಂಬಸ್ಥರ ಲಿಖಿತ ಹೇಳಿಕೆಯನ್ನು ಪಡೆಯಬೇಕು. ಆದರೆ ಯಾವುದೇ ಕಾರಣಕ್ಕೂ ಅಂಬ್ಯುಲೆನ್ಸ್ ಚಾಲಕರು ತಮ್ಮ ಕರ್ತವ್ಯದಲ್ಲಿ ಬೇಜವಾಬ್ದಾರಿ ಹೊಂದಿರಬಾರದು. ಈ ಕುರಿತು ಅಗತ್ಯ ನಿರ್ದೇಶನಗಳನ್ನು ಆದೇಶ ರೂಪದಲ್ಲಿ ಜಿಲ್ಲೆಯ 108 ಅಂಬ್ಯುಲೆನ್ಸ್ ಚಾಲಕರಿಗೆ ನೀಡುವಂತೆ ಜಿಲ್ಲಾ ಆರೋಗ್ಯಾಧಿಕಾರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ರೇಬಿಸ್ ನಿಯಂತ್ರಣ ಕಾರ್ಯಕ್ರಮದ ಕುರಿತು ಮಾತನಾಡಿದ ಜಿಲ್ಲಾಧಿಕಾರಿಗಳು, ಜಿಲ್ಲೆಯಲ್ಲಿ ಬೀದಿನಾಯಿಗಳಿಂದ ಕಡಿತಕ್ಕೆ ಒಳಗಾಗಿ ಅದರಿಂದ ರೇಬಿಸ್ ರೋಗಕ್ಕೆ ತುತ್ತಾದವರಿಗೆ ಸರ್ಕಾರ ನಿಗದಿಪಡಿಸಿದ ಪರಿಹಾರವನ್ನು ನೀಡಬೇಕು. ನಾಯಿ ಕಡಿದರೂ ಕೂಡ ಅವರಿಗೆ ಪರಿಹಾರ ನೀಡಬೇಕು. ಪಶು ಸೇವಾ ಮತ್ತು ಪಶು ವೈದ್ಯಕೀಯ ಇಲಾಖೆ, ರೇಬಿಸ್ ನಿಯಂತ್ರಣ ಘಟಕ ಹಾಗೂ ಸ್ಥಳೀಯ ಸಂಸ್ಥೆಗಳು ಒಟ್ಟಾಗಿ ಜಿಲ್ಲೆಯಲ್ಲಿರುವ ಬೀದಿನಾಯಿಗಳ ಸಮೀಕ್ಷೆಯನ್ನು ಕೈಗೊಂಡು, ಅವುಗಳಿಗೆ ಸೂಕ್ತ ಚುಚ್ಚು ಮದ್ದು, ಸಂತಾನ ಹರಣ ಚಿಕಿತ್ಸೆಯನ್ನು ಮಾಡಿಸಲು ಕ್ರಮ ಕೈಗೊಳ್ಳಬೇಕು. ಬೀದಿನಾಯಿಗಳ ಹಾವಳಿಯಿಂದ ಸಾರ್ವಜನಿಕರಿಗೆ ತೊಂದರೆಯಾಗದಂತೆ ಎಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದಿಂದ ತಾಲ್ಲೂಕು ಮಟ್ಟದಲ್ಲಿ ತಹಶೀಲ್ದಾರ ನೇತೃತ್ವದಲ್ಲಿ ಸಭೆಯನ್ನು ನಡೆಸಬೇಕು. ಸೆಕ್ಷನ್6(ಬಿ) ಪ್ರಕಾರ ಶಿಕ್ಷಣ ಸಂಸ್ಥೆಯ 100 ಗಜ ಅಂತರದೊಳಗೆ ಯಾವುದೇ ತಂಬಾಕು ಉತ್ಪನ್ನಗಳನ್ನು ಮಾರಾಟ ಮಡದಂತೆ ನಿಗಾವಹಿಸಲು ಕ್ರಮ ಕೈಗೊಳ್ಳಬೇಕು. ಕೋಟ್ಪಾ–2003 ರ ಕಾಯ್ದೆಯ ಸೆಕ್ಷನ್ 5 ಮತ್ತು ಸೆಕ್ಷನ್ 7ರ ಉಲ್ಲಂಘನೆ ಕಂಡುಬಂದಲ್ಲಿ ಪೊಲೀಸ್ ಇಲಾಖೆಯಿಂದ ಮೊಕದ್ದಮೆ ದಾಖಲಿಸಬೇಕು. ಪುರಸಭೆ, ಪಟ್ಟಣ ಪಂಚಾಯತಿ ಅಡಿಯಲ್ಲಿ ಬರುವ ಕಿರಾಣಿ ಅಂಗಡಿ, ಪಾನ್‌ಶಾಪ್, ಹೋಟೆಲ್ ಮತ್ತು ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಕೋಟ್ಪಾ–2003 ಕಾಯ್ದೆಯ ಸೆಕ್ಷನ್–4 ರಂತೆ ಧೂಮಪಾನ ನಿಷೇಧಿತ ಪ್ರದೇಶ ಎಂಬ ನಾಮಫಲಕ ಹಾಕಿಕೊಳ್ಳುವಂತೆ ನೋಡಿಕೊಳ್ಳಬೇಕು. ಸ್ವಚ್ಛತಾ ಸಿಬ್ಬಂದಿಗಳು ಮೂಲಕ ಪ್ರಚಾರ ಕೈಗೊಳ್ಳಬೇಕು. ತಾಲ್ಲೂಕು ಪಂಚಾಯತ್ ಹಾಗೂ ಗ್ರಾಮ ಪಂಚಾಯತ ಅಡಿಯಲ್ಲಿ ಬರುವ ಕಿರಾಣಿ ಅಂಗಡಿಗಳು, ಪಾನ್‌ಶಾಪ್, ಹೋಟೆಲ್ ಮತ್ತು ಇತರೆ ಸಾರ್ವಜನಿಕ ಸ್ಥಳಗಳಲ್ಲಿ ಸೆಕ್ಷನ್ 6ಎ ಅಡಿಯಲ್ಲಿ ಅಪ್ರಾಪ್ತ ವಯಸ್ಕರಿಗೆ ತಂಬಾಕು ಉತ್ಪನ್ನಗಳ ಮಾರಾಟ ಮಾಡುವುದು ಶಿಕ್ಷಾರ್ಹ ಅಪರಾಧ. ಈ ಕುರಿತು ಅಂಗಡಿ ಮಾಲೀಕರಿಗೆ ಸೂಕ್ತ ಸೂಚನೆ ನೀಡಿ, ಎಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ತಿಳಿಸಿದರು.

ಕುಷ್ಠರೋಗ ನಿಯಂತ್ರಣ ಕಾರ್ಯಕ್ರಮದ ಕುರಿತು ಮಾತನಾಡಿದ ಜಿಲ್ಲಾಧಿಕಾರಿಗಳು ಕುಷ್ಠರೋಗದ ಕುರಿತು ಸಾರ್ವಜನಿಕರಲ್ಲಿ ಇರುವ ಮೂಢನಂಬಿಕೆಗಳನ್ನು ಹೋಗಲಾಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಚರ್ಮದಲ್ಲಾಗುವ ಬದಲಾವಣೆಗಳನ್ನು ಗಮನಿಸಿ ತಜ್ಞ ವೈದ್ಯರ ಬಳಿ ತಪಾಸಣೆ ಮಾಡಿಸಬೇಕು. ಕುಷ್ಠರೋಗ ವಾಸಿ ಮಡಬಹುದಾದ ಖಾಯಿಲೆಯಾಗಿದ್ದು ಇದಕ್ಕೆ ನಿರಂತರ ಹಾಗೂ ಸೂಕ್ತ ಚಿಕಿತ್ಸೆಯನ್ನು ಪಡೆಯುವಂತೆ ರೋಗಿಗಳಲ್ಲಿ ಹಾಗೂ ರೋಗಿಯ ಬಾಧಿತರಿಗೆ ಸೂಕ್ತ ತಿಳುವಳಿಕೆ ಮೂಡಿಸಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಿಂಗರಾಜು, ಆರ್‌ಸಿಎಚ್ ಅಧಿಕಾರಿ ಡಾ.ಪ್ರಕಾಶ, ಕುಟುಂಬ ಕಲ್ಯಾಣಾಧಿಕಾರಿ ಡಾ. ರವೀಂದ್ರನಾಥ ಎಂ.ಎಚ್., ಡಿಟಿಒ ಡಾ.ಶಶಿಧರ, ಡಿಎಲ್‌ಒ ಡಾ.ಪ್ರಕಾಶ ಕೆ., ಗಂಗಾವತಿ ಉಪ ವಿಭಾಗ ಆಸ್ಪತ್ರೆಯ ಡಾ.ಈಶ್ವರ ಸವಡಿ ಸೇರಿದಂತೆ ತಾಲ್ಲೂಕು ಆರೋಗ್ಯಧಿಕಾರಿಗಳು, ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಹೆಣ್ಣು, ಗಂಡು ತಾರತಮ್ಯ ಹೋಗಲಾಡಿಸಿ

## ಪಿಡಿಒ ಬಸಪ್ಪ ಹೇಳಿಕೆ | ಲಿಂಗತ್ವ ದೌರ್ಜನ್ಯ ತಡೆಗೆ ಸಹಕರಿಸಿ



■ **ಹಂಪಿ ಟೈಮ್ಸ್ ರಾಯಚೂರು**

ಸಮಾಜದಲ್ಲಿ ಹೆಣ್ಣು ಗಂಡಿನ ತಾರತಮ್ಯ ಹೋಗಲಾಡಿಸಿದಾಗ ಮಾತ್ರ ಲಿಂಗತ್ವ ದೌರ್ಜನ್ಯ ತಡೆಗಟ್ಟಬಹುದು ಎಂದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸಪ್ಪ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಡಿ.6ರ(ಬುಧವಾರ)ದಂದು ಜಿಲ್ಲೆಯ ಮಾನವಿ ತಾಲೂಕಿನ ಜಾನೇಕಲ್ ಗ್ರಾಮದಲ್ಲಿ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ, ಸಂಜೀವಿನಿ –ಕೆ.ಎಸ್.ಆರ್.ಎಲ್.ಪಿ.ಎಸ್, ಜಿಲ್ಲಾ ಪಂಚಾಯತಿ ರಾಯಚೂರು, ತಾಲೂಕು ಪಂಚಾಯತಿ ಮಾನವಿ, ಸಂಜೀವಿನಿ ತಾಲೂಕು ಅಭಿಯಾನ ನಿರ್ವಹಣಾ ಘಟಕ, ಸಿರಿ ಸಂಜೀವಿನಿ ತಾಲೂಕು ಮಟ್ಟದ ಒಕ್ಕೂಟ, ಉಷಾ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಮಹಿಳಾ ಒಕ್ಕೂಟ ಜಾನೇಕಲ್, ಇವರುಗಳ ಸಂಯುಕ್ತಾಶ್ರಯದಲ್ಲಿ ಲಿಂಗತ್ವ ಆಧಾರಿತ ದೌರ್ಜನ್ಯ ವಿರುದ್ಧ ರಾಷ್ಟ್ರೀಯ ಅಭಿಯಾನವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಹೆಣ್ಣು ಮತ್ತು ಗಂಡು ಸಮಾನತೆ ಬರಬೇಕು. ಅದಕ್ಕೆ ಮಕ್ಕಳಿಗೆ ಚಿಕ್ಕವರಿರುವಾಗಲೇ ಸರಿಯಾದ ಸಂಸ್ಕಾರ ಕೊಟ್ಟರೇ ಉತ್ತಮ ಸಮಾಜ ರಚನೆಯಾಗಲು ಸಾಧ್ಯ. ಆ ಮೂಲಕ ಲಿಂಗತ್ವ ದೌರ್ಜನ್ಯ ತಡೆಗಟ್ಟಬಹುದು. ಮಹಿಳೆಯರು ಆರ್ಥಿಕವಾಗಿ, ಶೈಕ್ಷಣಿಕರಾಗಿ ಸಬಲರಾಗಬೇಕು, ಒಬ್ಬರಿಗೊಬ್ಬರು ಸಹಾಯಕ್ಕೆ ನಿಲ್ಲಬೇಕು. ಎಲ್ಲಾ ರೀತಿಯ ದೌರ್ಜನ್ಯವನ್ನು ತಡೆದು, ದೌರ್ಜನ್ಯ ಮುಕ್ತ ಜಿಲ್ಲೆಯನ್ನಾಗಿಸೋಣ ಎಂದರು.

ಮುಖ್ಯ ಅತಿಥಿಯಾಗಿ ಪೋಲೀಸ್ ಸಿಬ್ಬಂದಿ ರವಿ.ಪಿ ಅವರು ಮಾತನಾಡಿ ನಿಸರ್ಗದಲ್ಲಿ ಮಾನವರನ್ನು ಸಮಾನವಾಗಿಯೇ ಸೃಷ್ಟಿಸಲಾಗಿದೆ. ಆದರೆ, ಮಾನವ ಸಮಾಜದಲ್ಲಿ ಮಾನವರೆಲ್ಲರೂ ಸಮಾನರಾಗಿಲ್ಲ. ಸಾಮಾಜಿಕವಾಗಿ, ಆರ್ಥಿಕವಾಗಿ, ರಾಜಕೀಯವಾಗಿ, ಶೈಕ್ಷಣಿಕವಾಗಿ, ಸಾಂಸ್ಕೃತಿಕವಾಗಿ ಅಸಮಾನತೆ ಕಂಡು ಬರುತ್ತದೆ ಎಂದರು.

ಬ್ಲಾಕ್ ಮ್ಯಾನೇಜರ್ ರಮೇಶ ಮಾತನಾಡಿ ಮಹಿಳೆಯರು ದೌರ್ಜನ್ಯದ ವಿರುದ್ಧ, ಬಾಲ್ಯ ವಿವಾಹದ ವಿರುದ್ಧ, ಅಪೌಷ್ಟಿಕತೆ, ಲಿಂಗ ತಾರತಮ್ಯವನ್ನು ಧ್ವನಿವೆತ್ತುವುದರ ಮೂಲಕ ತಡೆಗಟ್ಟಬೇಕು. ಮಹಿಳೆಯರಿಗೆ ಸಮಾನವೇತನ ನೀಡುವುದರ ಮೂಲಕ ಲಿಂಗತ್ವ ಸಮಾನತೆಯನ್ನು ಹಣಕಾಸಿನ ವ್ಯವಹಾರದಲ್ಲಿಯೂ ಕೂಡ ಪಾಲಿಸಬೇಕೆಂದು ತಿಳಿಸಿದರು. ವಲಯ ಮೇಲ್ವಿಚಾರಕರಾದ ಸೂರತ್ ಪ್ರಸಾದ್ ಗಟ್ಟು ಅವರು ಮಾತನಾಡಿ ಮಹಿಳಾ ಹಕ್ಕುಗಳ ಕುರಿತು ಜಾಗೃತಿ ಮೂಡಿಸಲು ಮತ್ತು ಮಹಿಳಾ ಸಮಸ್ಯೆಗಳನ್ನು ಬಗೆಹರಿಸಲು ವಿವಿಧ ಲಿಂಗತ್ವ ವೇದಿಕೆಗಳನ್ನು ಯೋಜನೆಯಡಿಯಲ್ಲಿ ರಚಿಸಬೇಕಾಗಿದೆ. ಸ್ವ–ಸಹಾಯ ಸಂಘಗಳಲ್ಲಿ ಲಿಂಗತ್ವ ಪ್ರಮುಖ ವ್ಯಕ್ತಿಗಳನ್ನು ಆಯ್ಕೆ ಮಾಡಲಾಗಿದೆ ಎಂದರು.

ವಲಯ ಮೇಲ್ವಿಚಾರಕ ಶರಣು ಬಸವ ಅವರು ಮಾತನಾಡಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟಗಳಲ್ಲಿ ಲಿಂಗತ್ವ ವೇದಿಕೆಗಳನ್ನು ರಚನೆ ಮಾಡುವುದು, ತಾಲ್ಲೂಕು ಮಟ್ಟದ ಒಕ್ಕೂಟಗಳಲ್ಲಿ ಸಾಮಾಜಿಕ ಕ್ರಿಯಾ ಸಮಿತಿಗಳು ಹಾಗೂ ತಾಲ್ಲೂಕು ಮಟ್ಟದಲ್ಲಿ ಲಿಂಗತ್ವ ವೇದಿಕೆಗಳನ್ನು ರಚಿಸುವುದು ಹಾಗೂ ಮಹಿಳಾ ಸಮಸ್ಯೆಗಳನ್ನು ಬಗೆಹರಿಸುವುದು ಯೋಜನೆಯ ತಿಳಿಸಿದರು. ಇದೇ ವೇಳೆ ಸ್ವಚ್ಛತಾ ಸಖಿಯರನ್ನು ಶಾಲು ಹೊದಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಒಕ್ಕೂಟದ ಅಧ್ಯಕ್ಷ ಅಮರಮ್ಮ, ಕಾರ್ಯದರ್ಶಿ ಜೈತುನಾ ಬಿ, ಮುಖ್ಯ ಪುಸ್ತಕ ಬರಹಗಾರ ಶ್ರೀದೇವಿ, ಎಲ್.ಸಿ.ಆರ್.ಪಿ ಸಂಗೀತಾ, ಹೆಚ್ಚಿನ ಸಂಖ್ಯೆಯಲ್ಲಿ ಮಹಿಳಾ ಸ್ವ ಸಹಾಯ ಗುಂಪಿನ ಮಹಿಳೆಯರು ಭಾಗವಹಿಸಿದ್ದರು.

# ಇರಕಲ್‌ಗಡಾದಲ್ಲಿ ಅಂಬೇಡ್ಕರ್ ಓದು ಕಾರ್ಯಕ್ರಮ ಯಶಸ್ವಿ



■ **ಹಂಪಿ ಟೈಮ್ಸ್ ಕೊಪ್ಪಳ**

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಇರಕಲ್ಲಗಡಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದಲ್ಲಿ 2023–24ನೇ ಸಾಲಿನ ಅಂಬೇಡ್ಕರ್ ಓದು ಕಾರ್ಯಕ್ರಮವನ್ನು ಮಂಗಳವಾರದಂದು ಇರಕಲ್ಲಗಡದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು.

ಇರಕಲ್ಲಗಡಾ ಗ್ರಾಮ ಪಂಚಾಯತ ಅಧ್ಯಕ್ಷರಾದ ಶಿವಮ್ಮ ಶೇಖರಪ್ಪ ನಾಯಕ ಅವರು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಇರಕಲ್ಲಗಡಾ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲರಾದ ಪ್ರೋ. ಉಮೇಶ್ ಅವರು ವಹಿಸಿದ್ದರು. ಕಾರ್ಯಕ್ರಮದಲ್ಲಿ ಗುಡಗೇರಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ಭೀಮೇಶ ಯರಡೋಣಿ ಅವರು ವಿಶೇಷ ಉಪನ್ಯಾಸ ನೀಡಿದರು.

ಅಂಬೇಡ್ಕರ್ ರವರ ಕುರಿತ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿಧ್ಯಾರ್ಥಿಗಳಿಗೆ ಪುಸ್ತಕ ಬಹುಮಾನವನ್ನು ವಿತರಿಸಲಾಯಿತು. ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ್ ಮರಬನಳ್ಳಿ ಭಾಗವಹಿಸಿದ್ದರು. ಕಾಲೇಜಿನ ಆಂತರಿಕ ಭರವಸೆಯ ಕೋಶದ ಸಂಚಾಲಕರಾದ ಪ್ರಕಾಶಗೌಡ ಎಸ್.ಯು., ಶಂಕ್ರಯ್ಯ ಅಬ್ಬಿಗೇರಿ, ವೆಂಕಟೇಶ ಹೊಸಮನಿ ಉಪಸ್ಥಿತರಿದ್ದರು.

# ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧ

■ **ಹಂಪಿ ಟೈಮ್ಸ್ ರಾಯಚೂರು**

ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ, ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದರ ಮೂಲಕ ಅವರ ಬಾಲ್ಯ ಮತ್ತು ಶಿಕ್ಷಣದ ಹಕ್ಕನ್ನು ಕಸಿದುಕೊಂಡಾಗುತ್ತದೆ, ಯಾವುದೇ ಕಾರಣಕ್ಕೂ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳಬಾರದು ಎಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ದಯಾನಂದ.ಎಂ ಬೇಲೂರೆ ಅವರು ಹೇಳಿದರು.

ಅವರು,ಡಿ.07ರ (ಗುರುವಾರ) ನಗರದ ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆ ಸ್ಟೇಷನ್ ಬಜಾರನಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕತೆ ನಿರ್ಮೂಲನೆ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಮತ್ತು ಶಾಲಾ ಶಿಕ್ಷಣ ಮತ್ತು ಸಾಕ್ಷಾರತ ಇಲಾಖೆಯ ವತಿಯಿಂದ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.



ಒಂದು ವೇಳೆ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಲ್ಲಿ ಮಾಲೀಕರ ವಿರುದ್ಧ ಕನಿಷ್ಠ 6 ತಿಂಗಳಿಗಿಂತ ಕಡಿಮೆಯಿಲ್ಲದಂತೆ ಗರಿಷ್ಠ ಎರಡು ವರ್ಷದವರೆಗೆ ಜೈಲು ಶಿಕ್ಷೆ ಹಾಗೂ ಕನಿಷ್ಠ ರೂ. 20000/– ಗಳಿಗಿಂತ ಕಡಿಮೆಯಿಲ್ಲದಂತೆ ಗರಿಷ್ಠ ರೂ.50000/– ಗಳವರೆಗೆ ದಂಡ ಮತ್ತು ಶಿಕ್ಷೆ ವಿಧಿಸಲಾಗುತ್ತದೆ ಎಂದರು.

ಮಕ್ಕಳನ್ನು ಕೆಲಸಕ್ಕೆ ಕಳುಹಿಸುವ ಪೋಷಕರ ವಿರುದ್ಧ ಸಹ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯಡಿ ದಂಡವಿಧಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಕಾರ್ಮಿಕ ಅಧಿಕಾರಿ ಆರತಿ, ಜಿಲ್ಲಾ ಬಾಲಕಾರ್ಮಿಕ ಯೋಜನಾಧಿಕಾರಿ ಮಂಜುನಾಥರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮುದುಕಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್ ಬಂಡಾರಿ, ಸರಕಾರಿ ಮಾದರಿಯ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯಗುರುಗಳು ರಾಘವೇಂದ್ರ, ಹಾಗೂ ಶಾಲೆಯ ಶಿಕ್ಷಕರು ಉಪಸ್ಥಿತರಿದ್ದರು.

**ಕವಿ ಮನಸು**

## ದುಡಿಯುವ ಗಂಡಸರು ಬಲು ಜೋರು!

ಭಾವನೆಗಳನ್ನೆ ಅರ್ಥ ಮಾಡಿಕೊಳ್ಳದ
ಅತ್ತೆ ನಾದನಿಯನ್ನು ದಾಯಾದಿಯಾಗಿ
ಕಾಣುವ
ಮುದಡಿದ ಮನಸ್ಸಿಗೆ ಸಾಂತ್ವಾನ ಹೇಳದೆ
ಕೊರಗುವ ಕುಟುಕುವ ಮನಸ್ಸು ಇದ್ದಾಗ
ನಿಮಗೆ ಗಂಡಸರು ಬಲು ಜೋರು
ಎಂದೆನಿಸಿತಲ್ಲವೆ ?

ಬೆವರು ಸುರಿಸಿ ರಕ್ತ ಬಸಿದು
ಹೊಟ್ಟೆ ಹಸಿದರು ನಿಮಗಾಗಿ
ನಿಮ್ಮ ಏಳಿಗೆಗಾಗಿ ಸದಾ ಸಿದ್ಧರಿರುವ
ನಾವುಗಳು ನಾಯಕರಾದಾಗ
ನಿಮಗೆ ಗಂಡಸರು ಬಲು ಜೋರು
ಎಂದಿನಿಸಿತಲ್ಲವೆ ?

ಮಕ್ಕಳು ಅನಾರೋಗ್ಯದಿ ಬಳಲಿದಾಗ
ಜೇಬಲ್ಲಿ ದುಡ್ಡಿಲ್ಲದಿದ್ದರು
ಸಾಲ ಮಾಡಿ ದುಡ್ಡು ತಂದು
ಅಮ್ಮನಿಗಿಂತಲೂ ಹೆಚ್ಚು ಪ್ರೀತಿತೋರುವ
ನಾವುಗಳು
ನಿಮಗೆ ಗಂಡಸರು ಬಲು ಜೋರು
ಎಂದೆನಿಸಿತಲ್ಲವೆ ?

ಅತ್ತೆ ಅಕ್ಕ ಅಮ್ಮ ತಪ್ಪು ಮಾಡಿದಾಗ
ಬೈದು ಬುದ್ಧಿ ಹೇಳಿ
ಬದುಕಿಗೆ ಭರವಸೆ ತುಂಬುವ ನಾವುಗಳು
ಪ್ರೇರಣೆ ನೀಡಿದ ನಾವು
ನಿಮಗೆ ಗಂಡಸರು ಬಲು ಜೋರು
ಎಂದಿನಿಸಿತಲ್ಲವೆ

ಹಬ್ಬಕ್ಕೆ ಹೊಸ ಬಟ್ಟೆ ತಂದು
ಕುಟುಂಭ ಚೆನ್ನಾಗಿರಲೆಂದು
ಹಗಲಿರಳು ದುಡಿದು ದಡ್ಡ ಎನಿಸದರು
ಭೇದ ಬಾವ ಎಣಿಸದ
ನಿಮಗೆ ಗಂಡಸರು ಬಲು ಜೋರು
ಎಂದೆನಿಸಿತಲ್ಲವೆ ?
ಹೌದು ದುಡಿಯುವ ಗಂಡಸರು ಬಲು
ಜೋರು

– **ಮಹೇಶ್ ಎಸ್ ಹೆಚ್**
ಶಿಕ್ಷಕರು, ಸರಕಾರಿ ಪ್ರೌಢ ಶಾಲೆ ಹೆಸರೂರು
ತಾಲ್ಲೂಕು ಮುಂಡರಗಿ ಜಿಲ್ಲೆ ಗದಗ

## ಸಂಸ್ಕೃತಿ (ಚುಟುಕು)

ನಮ್ಮ ಹಿರಿಯರಿಂದ ಕಲಿಯೋಣ ಸಂಸ್ಕೃತಿ
ತಲಾ ತಲಾಂತರಗಳಿಗೆ ಆಗಲಿ ಅದರ ಸ್ವೀಕೃತಿ.
ಸಂಸ್ಕೃತಿಯಿಂದ ಬದಲಾದಿತು ಮನಸ್ಥಿತಿ
ತಾನಾಗಿಯೇ ಮನುಜನಾಗುವನು ಸುಕೃತಿ.

– **ಮಂಜುಶ್ರೀ ಮುರಳೀಧರ್.**
ತೋರಣಗಲ್ಲು, ಬಳ್ಳಾರಿ.

## ತುಂಗಭದ್ರಾ ನೀರಿನ ಮಟ್ಟ



| ಗುರುವಾರ : 07-12-2023 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1592.04 ಅಡಿ |
| ಒಳ ಹರಿವು | 577 ಕ್ಯುಸೆಕ್ |
| ಹೊರ ಹರಿವು | 2347 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 12.817 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |

| ಕಳೆದ ವರ್ಷ ಇದೇ ದಿನ | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1628.82 ಅಡಿ |
| ಒಳ ಹರಿವು | 1739 ಕ್ಯುಸೆಕ್ |
| ಹೊರ ಹರಿವು | 6064 ಕ್ಯುಸೆಕ್ |
| ಸಾಮರ್ಥ್ಯ | 89.695 ಟಿಎಂಸಿ |

**ಓದುಗರ ಗಮನಕ್ಕೆ**

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

ಮೈಕ್ರೋ ನ್ಯೂಸ್

## ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ನೂತನ ಹಂಗಾಮಿ ಕುಲಪತಿ ನೇಮಕ



**ಹಂಪಿ ಟೈಮ್ಸ್ ಬಳ್ಳಾರಿ**
ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ನೂತನ ಹಂಗಾಮಿ ಕುಲಪತಿಯಾಗಿ ಸಮಾಜ ವಿಜ್ಞಾನ ನಿಕಾಯದ ಡೀನರು ಹಾಗೂ ಇತಿಹಾಸ ಮತ್ತು ಪುರಾತತ್ವ ವಿಭಾಗದ ಪ್ರಾಧ್ಯಾಪಕರಾದ ಪ್ರೊ.ಅನಂತ್ ಎಲ್ ಝುಂಡೇಕರ್ ಅವರನ್ನು ನೇಮಕ ಮಾಡಿ ರಾಜ್ಯಪಾಲರು ಆದೇಶ ಹೊರಡಿಸಿದ್ದಾರೆ.
ಗುರುವಾರದಂದು, ನೂತನ ಕುಲಪತಿಗಳಿಗೆ ನಿಕಟಪೂರ್ವ ಹಂಗಾಮಿ ಕುಲಪತಿಯಾಗಿದ್ದ ಡಾ.ಸಾಹೇಬ್ ಅಲಿ ಎಚ್ ನಿರಗುಡಿ ಅವರು ಅಧಿಕಾರ ಹಸ್ತಾಂತರಿಸಿದರು.
ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಕುಲಸಚಿವ ರುದ್ರೇಶ್.ಎಸ್.ಎನ್., ಮೌಲ್ಯಮಾಪನ ಕುಲಸಚಿವ ಪ್ರೊ.ರಮೇಶ್ ಓ ಓಲೇಕಾರ್, ವಿತ್ತಾಧಿಕಾರಿ ಪ್ರೊ.ಸದ್ಯೋಜಾಥಪ್ಪ ಈರ್ವರನ್ನು ಅಭಿನಂದಿಸಿದರು. ವಿಶ್ವವಿದ್ಯಾಲಯದ ಎಲ್ಲ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಜರಿದ್ದರು.

## ವಸತಿ ಶಾಲೆ ನಡೆಸಲು ಸುಸಜ್ಜಿತ ಕಟ್ಟಡ ಬಾಡಿಗೆ ನೀಡಲು ಮಾಲೀಕರಿದ್ದಲ್ಲಿ ಸಂಪರ್ಕಿಸಿ

**ಹಂಪಿ ಟೈಮ್ಸ್ ಬಳ್ಳಾರಿ**
ಜಿಲ್ಲೆಯ ಕುರುಗೋಡು ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಾಂಧಿತತ್ವ ಆಧಾರಿತ ಬಾಲಕಿಯರ ವಸತಿ ಶಾಲೆ ನಡೆಸಲು ಕುರುಗೋಡು ಮತ್ತು ಕಂಪ್ಲಿ ಸುತ್ತಮುತ್ತಲಿನ ಪ್ರದೇಶದಲ್ಲಿ ಸುಸಜ್ಜಿತ ಕಟ್ಟಡವಿದ್ದಲ್ಲಿ ಬಾಡಿಗೆ ನೀಡಲು ಆಸಕ್ತ ಮಾಲೀಕರು ಸಂಪರ್ಕಿಸಬಹುದು ಎಂದು ಶಾಲೆಯ ಪ್ರಾಂಶುಪಾಲರು ತಿಳಿಸಿದ್ದಾರೆ.
ಪ್ರಸ್ತುತ ಶಾಲೆಯು ಬಾಡಿಗೆ ಕಟ್ಟಡದಲ್ಲಿ ನಿರ್ವಹಿಸುತ್ತಿದ್ದು, ಬಾಡಿಗೆ ಕಟ್ಟಡದಲ್ಲಿ 250 ಬಾಲಕಿಯರ ವಸತಿಗೆ ಸಾಕಷ್ಟು ಸ್ಥಳಾವಕಾಶ ಇಲ್ಲದಿರುವುದರಿಂದ ಹಾಗೂ ಆಟದ ಮೈದಾನ ಇಲ್ಲದೇ ಇರುವುದರಿಂದ ಮಕ್ಕಳ ಸಮಗ್ರ ಬೆಳವಣಿಗೆಗೆ ಅಡಚಣೆಯಾಗುತ್ತಿದೆ.
ಆದ್ದರಿಂದ, ಮಕ್ಕಳ ಸರ್ವಾಂಗೀಣ ಬೆಳವಣಿಗೆಗೆ ಸಹಾಯಕವಾಗುವ ನಿಟ್ಟಿನಲ್ಲಿ ಸೂಕ್ತ ಸ್ಥಳಾವಕಾಶ ಹೊಂದಿರುವ ಹಾಗೂ ಶಿಕ್ಷಣ, ವಸತಿ ಹಾಗೂ ಇತರೆ ಅಗತ್ಯತೆಗಳನ್ನು ಪೂರೈಸಬಲ್ಲ ಬಾಡಿಗೆ ಕಟ್ಟಡ ಬೇಕಾಗಿರುತ್ತದೆ. ಕಟ್ಟಡದ ದಾಖಲೆ ಸಲ್ಲಿಸಬೇಕು.
ಕುರುಗೋಡು ಅಥವಾ ಕಂಪ್ಲಿ ಪಟ್ಟಣದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಟ್ಟಡವನ್ನು ಹೊಂದಿರುವ ಆಸಕ್ತ ಮಾಲೀಕರು, ಪ್ರಕಟಣೆಗೊಂಡ 15 ದಿನಗಳ ಒಳಗಾಗಿ ಪ್ರಾಂಶುಪಾಲರು, ಗಾಂಧಿತತ್ವ ಆಧಾರಿತ ವಸತಿ ಶಾಲೆ, ಕುರುಗೋಡು, ಬಳ್ಳಾರಿ ಜಿಲ್ಲೆ. ಮೊ.8970731698, ಈಮೇಲ್: kreismdrs510@gmail.com ಈ ವಿಳಾಸಕ್ಕೆ ಸಂಪರ್ಕಿಸಬಹುದು ಎಂದು ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಂಪಿ ಟೈಮ್ಸ್
ವಿಜಯನಗರದ ಹೆಮ್ಮೆ
ಸ್ಥಳೀಯ ಸುದ್ದಿಗಳಿಗಾಗಿ ಭೇಟಿ ನೀಡಿ
www.hampitimes.com
epaper.hampitimes.com

# ದಾಖಲೆ ಡಿಜಿಟಲೀಕರಣ ಬಳ್ಳಾರಿ ಜಿಲ್ಲೆ ನಂ.1

**ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿಕೆ | ಸರ್ಕಾರದ ವೆಬ್‌ಸೈಟ್‌ಗೆ ಕಂದಾಯ ಇಲಾಖೆ ದಾಖಲೆಗಳ ಸ್ಕ್ಯಾನ್ ಮೂಲಕ ಸೇರ್ಪಡೆ**

**ಹಂಪಿ ಟೈಮ್ಸ್ ಬಳ್ಳಾರಿ**
ರಾಜ್ಯದಲ್ಲಿಯೇ ಕಂದಾಯ ಇಲಾಖೆ ದಾಖಲೆಗಳನ್ನು ಡಿಜಿಟಲೀಕರಣ ಮಾಡುವಲ್ಲಿ ಬಳ್ಳಾರಿ ಜಿಲ್ಲೆಯು ಮೊದಲ ಸ್ಥಾನದಲ್ಲಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಹೇಳಿದರು.
ಗುರುವಾರ, ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ಕಂದಾಯ ಸಚಿವರ ಇಚ್ಛಾಶಕ್ತಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯ ಅಭಿಲೇಖಾಲಯದಲ್ಲಿ ಹಳೇ ಕಡತಗಳ ಪಟ್ಟಿ ಮತ್ತು ಸೂಚ್ಯಂಕ ಕಾರ್ಯ ಕೈಗೆತ್ತಿಕೊಂಡಿದ್ದು, ಸರ್ಕಾರದ ವೆಬ್‌ಸೈಟ್‌ನಲ್ಲಿ ಸ್ಕ್ಯಾನ್ ಮಾಡುವ ಮೂಲಕ ಡಿಜಿಟಲೀಕರಣ ಮಾಡಲಾಗುತ್ತಿದೆ. ಈವರೆಗೆ ಒಟ್ಟು 146063 ಕಡತಗಳನ್ನು ಸ್ಕ್ಯಾನಿಂಗ್ ಕಾರ್ಯ ಪೂರ್ಣಗೊಂಡಿದೆ ಎಂದು ತಿಳಿಸಿದರು.

### ಕಂದಾಯ ಗ್ರಾಮ:

ಜಿಲ್ಲೆಯಲ್ಲಿ ಒಟ್ಟು 73 ಹೊಸ ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲು ಗುರುತಿಸಲಾಗಿದ್ದು, ಈ ಪೈಕಿ 06 ತಿಂಗಳ ಅವಧಿಯಲ್ಲಿ 14 ಪ್ರಾಥಮಿಕ ಅಧಿಸೂಚನೆ ಮತ್ತು 07 ಅಂತಿಮ ಅಧಿಸೂಚನೆ ಹೊರಡಿಸಲು ಸರ್ಕಾರಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ ತಿಳಿಸಿದರು.

### ಬರ ಪರಿಸ್ಥಿತಿ ನಿರ್ವಹಣೆ:

ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಒಟ್ಟು 114 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದು ಎಂದು ಗುರುತಿಸಿ ಕ್ರಿಯಾ ಯೋಜನೆ ರೂಪಿಸಿಕೊಂಡಿದ್ದು,



ಕುಡಿಯುವ ನೀರಿನ ಸಮಸ್ಯೆ ಎದುರಿಸಲು ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆಗೆ ಪಡೆಯಲಾಗುವುದು ಹಾಗೂ ಕುಡಿಯುವ ನೀರಿನ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತದೆ ಎಂದರು.
ಪ್ರಸ್ತುತ ಜಿಲ್ಲಾಧಿಕಾರಿಗಳ ಎಸ್.ಡಿ.ಆರ್.ಎಫ್ ಪಿ.ಡಿ ಖಾತೆಯಲ್ಲಿ ರೂ.37 ಕೋಟಿ ಅನುದಾನ ಲಭ್ಯವಿದ್ದು, ಅನುದಾನದ ಕೊರತೆ ಇರುವುದಿಲ್ಲ. ತಾಲ್ಲೂಕು ತಹಶೀಲ್ದಾರರ ಎಸ್.ಡಿ.ಆರ್.ಎಫ್ ಖಾತೆಯಲ್ಲಿ ಒಟ್ಟು ರೂ.212 ಲಕ್ಷಗಳು ಬರ ನಿರ್ವಹಣೆಗೆ ಲಭ್ಯವಿದ್ದು, ತುರ್ತು ಕಾರ್ಯಗಳಾದ ಕುಡಿಯುವ ನೀರಿನ ಸಮಸ್ಯೆ ಮತ್ತು ಮೇವಿನ ಸಮಸ್ಯೆಗಳಿಗೆ ಪರಿಸ್ಥಿತಿ ಅನುಗುಣವಾಗಿ ಬಳಸಿಕೊಳ್ಳಲಾಗುವುದು ಎಂದು ತಿಳಿಸಿದರು.
ಪ್ರಸ್ತುತ 247132 ಮೆ.ಟನ್ ಮೇವು ಲಭ್ಯವಿದ್ದು, ಮುಂದಿನ 25 ವಾರಗಳಿಗೆ ಸಾಕಾಗುತ್ತದೆ. ಮೇವಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಲು ಅಂತರ್ ರಾಜ್ಯ ಮೇವು ಸಾಗಾಣಿಕೆಯನ್ನು ನಿರ್ಭಂದಿಸಲಾಗಿದ್ದು, ಬಳ್ಳಾರಿ ಮತ್ತು ಸಿರುಗುಪ್ಪದಲ್ಲಿ ಮೇವಿನ ಚೆಕ್‌ಪೋಸ್ಟ್‌ಗಳನ್ನು ತೆರೆಯಲು ಕ್ರಮ ವಹಿಸಲಾಗಿದೆ. ಸಿರುಗುಪ್ಪ ತಾಲ್ಲೂಕಿನಲ್ಲಿ ಹೊರ ರಾಜ್ಯಕ್ಕೆ ಸಾಗಾಣಿಕೆ ಮಾಡಲಾಗುತ್ತಿದ್ದ ಮೇವನ್ನು ಚೆಕ್‌ಪೋಸ್ಟ್‌ಗಳಲ್ಲಿ ಸೀಜ್ ಮಾಡಲಾಗಿದೆ ಎಂದರು.

### ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಾಯಿಸಿಕೊಳ್ಳಿ:

ಬರ ಪರಿಸ್ಥಿತಿಯಿಂದ ಹಾನಿಯಾದ ಬೆಳೆ ನಷ್ಟಕ್ಕೆ ಪರಿಹಾರವನ್ನು ಸರ್ಕಾರವು ಫ್ರೂಟ್ಸ್ ತಂತ್ರಾಂಶದ ಮೂಲಕ ನೀಡುತ್ತಿದ್ದು, ನೋಂದಣಿ ಮಾಡಿಸಿಕೊಳ್ಳದ ರೈತರು ಕೂಡಲೇ ಕೃಷಿ ಅಥವಾ ತೋಟಗಾರಿಕೆ ಇಲಾಖೆ ಅಥವಾ ಕಂದಾಯ ಇಲಾಖೆಯ ಕಚೇರಿಗೆ ತೆರಳಿ ದಾಖಲೆಗಳನ್ನು ನೀಡಿ ನೊಂದಾಯಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಮಿಶ್ರಾ ಅವರು ತಿಳಿಸಿದರು.

### ಭೂಮಿ ಯೋಜನೆ:

ಜಿಲ್ಲೆಯಲ್ಲಿ ನೋಟೀಸ್ ಇಲ್ಲದೆ ಇರುವ ಪ್ರಕರಣದಲ್ಲಿ 30350 ಪ್ರಕರಣಗಳು ಒಂದು ದಿನದಲ್ಲಿ ಕಾಲವಾಶಗಳಲ್ಲಿ ವಿಲೇಗೊಳಿಸಲಾಗಿದೆ. ನೋಂದಾಯಿತ ಖಾತ ಬದಲಾವಣೆ ಪ್ರಕರಣಗಳು (ತಿಳುವಳಿಕೆ ಚಿಟಿ) ನೋಟೀಸ್ ನೀಡಿ ಸರ್ಕಾರ ನಿಗಧಿಪಡಿಸಿದ 07 ದಿನ ಕಾಲಮಿತಿ ಒಳಗೆ 7962 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ನೊಂದಾಯಿತವಲ್ಲದ ಖಾತ ಬದಲಾವಣೆ ಪ್ರಕರಣಗಳು ನೋಟೀಸು ನೀಡಿ ಸರ್ಕಾರ ನಿಗಧಿಪಡಿಸಿದ 15 ದಿನ ಕಾಲಮಿತಿ ಒಳಗೆ 2406 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ ಎಂದು ಅವರು ತಿಳಿಸಿದರು. ಪೈಕಿ ಆರ್.ಟಿ.ಸಿ ಯಲ್ಲಿ 19000 ಪ್ರಕರಣಗಳಿದ್ದು, ಈ ಪೈಕಿ 7518 ವಿಲೇಗೊಳಿಸಲಾಗಿದೆ. ತಹಶೀಲ್ದಾರರ ಹಂತದಲ್ಲಿ ಕಂದಾಯ ಪ್ರಕರಣಗಳು 1405 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ಒಂದು ವರ್ಷ ಮೇಲ್ಪಟ್ಟು 152 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ಸಹಾಯಕ ಆಯುಕ್ತರ ಹಂತದಲ್ಲಿ ಕಂದಾಯ ಪ್ರಕರಣಗಳು 341 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ಒಂದು ವರ್ಷ ಮೇಲ್ಪಟ್ಟು 04 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ಜಿಲ್ಲಾಧಿಕಾರಿಗಳ ಹಂತದಲ್ಲಿ ಕಂದಾಯ ಪ್ರಕರಣಗಳು 70 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ. ಒಂದು ವರ್ಷ ಮೇಲ್ಪಟ್ಟು 01 ಪ್ರಕರಣಗಳನ್ನು ವಿಲೇಗೊಳಿಸಲಾಗಿದೆ ಎಂದು ಹೇಳಿದರು.

### ಇನಾಂ:

ಕರ್ನಾಟಕ ಇನಾಂ ರದತಿ ಕಾಯ್ದೆಯಡಿಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ರೀ-ಗ್ರಾಂಟ್‌ಗಾಗಿ ಒಟ್ಟು 13102 ಅರ್ಜಿಗಳು ಸ್ವೀಕೃತಿಯಾಗಿದ್ದು, ಇವುಗಳ ಪೈಕಿ 25 ಅರ್ಜಿಗಳು ತಿರಸ್ಕೃತ ಮಾಡಿ 5645 ಅರ್ಜಿಗಳು ರೀ-ಗ್ರಾಂಟ್ ಮಾಡಿ ಪಟ್ಟಾ ನೀಡಲಾಗಿದೆ. ಇನ್ನು ವಿಚಾರಣೆಗೆ 7432 ಬಾಕಿ ಉಳಿದಿರುತ್ತದೆ ಎಂದು ಹೇಳಿದರು.
ಜಿಲ್ಲೆಯಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ 2024ರ ಪ್ರಕ್ರಿಯೆ ನಡೆಯುತ್ತಿದ್ದು, ಹಕ್ಕು ಮತ್ತು ಆಕ್ಷೇಪಣೆ ಸಲ್ಲಿಸಲು ಡಿ.09 ಕೊನೆಯ ದಿನವಾಗಿದೆ. ಜಿಲ್ಲೆಯ 18 ವರ್ಷ ತುಂಬಿದ ಎಲ್ಲಾ ಸಾರ್ವಜನಿಕರು ಮತದಾರರ ಪಟ್ಟಿಯಲ್ಲಿ ನೊಂದಣಿ ಮಾಡಿಕೊಳ್ಳಲು ಮತ್ತು ತಿದ್ದುಪಡಿಗಾಗಿ ತಾಲ್ಲೂಕು ಕಚೇರಿಗೆ ಅಥವಾ ಸಂಬಂಧಪಟ್ಟ ಬಿಎಲ್‌ಓಗಳನ್ನು ಭೇಟಿ ಮಾಡಬಹುದು ಎಂದು ಹೇಳಿದರು. ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರಾ ಹಾಗೂ ಆಪ್ತ ಸಹಾಯಕರು ಉಪಸ್ಥಿತರಿದ್ದರು.

## ವಿಕಸಿತ ಭಾರತ ಸಂಕಲ್ಪ ಯಾತ್ರಾ ರೂಪನಗುಡಿಯಲ್ಲಿ ಆರೋಗ್ಯ ಜಾಗೃತಿ



**ಹಂಪಿ ಟೈಮ್ಸ್ ಬಳ್ಳಾರಿ**
ತಾಲೂಕಿನ ರೂಪನಗುಡಿ ಗ್ರಾಮದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಗ್ರಾಮೀಣ ಬ್ಯಾಂಕ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ರೂಪನಗುಡಿ ಗ್ರಾಮ ಪಂಚಾಯಿತಿ ಸಹಕಾರದೊಂದಿಗೆ ವಿಕಸಿತ ಭಾರತ ಸಂಕಲ್ಪ ಯಾತ್ರಾ ಅಡಿಯಲ್ಲಿ ಗುರುವಾರ ಆರೋಗ್ಯ ಜಾಗೃತಿ ಕಾರ್ಯಕ್ರಮ ನಡೆಯಿತು.
ರೂಪನಗುಡಿ ಸಮುದಾಯ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಚಿತ್ರ ವರ್ಣೇಕರ್ ಅವರು ಮಾತನಾಡಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಡಿಯಲ್ಲಿ ದೊರೆಯುವ ಎಲ್ಲಾ ಆರೋಗ್ಯ ಸೇವೆಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.
ಗಂಭೀರ ಆರೋಗ್ಯ ಸಮಸ್ಯೆಗಳಿದ್ದಲ್ಲಿ ಚಿಕಿತ್ಸೆಗಾಗಿ ಪ್ರತಿಯೊಬ್ಬರೂ ಆಯುಷ್ಮಾನ್ ಕಾರ್ಡ್‌ಗಳನ್ನು ಮಾಡಿಸುವ ಮೂಲಕ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.
ಕೆನರಾ ಬ್ಯಾಂಕ್‌ನ ಅಧಿಕಾರಿ ದಿನೇಶ್ ಅವರು, ಬ್ಯಾಂಕಿನ ಸಾಲ ಸೌಲಭ್ಯದ ಬಗ್ಗೆ ಕುರಿತು ತಿಳಿಸಿದರು. ಡಿಜಿಟಲ್ ವಿಡಿಯೋ ಪರದೆ ಮೂಲಕ ಯೋಜನೆಗಳ ಕುರಿತು ಪ್ರದರ್ಶನ ನೀಡಲಾಯಿತು. ಕೃಷಿ ಇಲಾಖೆಯಿಂದ ಡ್ರೋನ್ ಮುಖಾಂತರ ಔಷದಿ ಸಿಂಪರಣೆ ಪ್ರಾತ್ಯಕ್ಷಿಕೆ ನೀಡಲಾಯಿತು. ಕಾರ್ಯಕ್ರಮದಲ್ಲಿ ರಕ್ತದೊತ್ತಡ, ಮಧುಮೇಹ ರೋಗ ಪರೀಕ್ಷೆ ಮತ್ತು ಕ್ಷಯ ರೋಗ ಪರೀಕ್ಷೆಗಾಗಿ ಕಫ ಸಂಗ್ರಹ ಹಾಗೂ ಅಂಗಾಂಗ ದಾನ ನೋಂದಣಿ ಮಾಡಲಾಯಿತು.
ಈ ಸಂದರ್ಭದಲ್ಲಿ ರೂಪನಗುಡಿ ಗ್ರಾಮ ಪಂಚಾಯಿತಿ ಉಪಾಧ್ಯಕ್ಷ ರಾಮಾಂಜಿನಿ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ್, ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕ ಮಲ್ಲಿಕಾರ್ಜುನ್, ರೂಪನಗುಡಿ ಸಮುದಾಯ ಆರೋಗ್ಯ ಕೇಂದ್ರದ ಎಲ್ಲಾ ಸಿಬ್ಬಂದಿ ವರ್ಗದವರು, ಆಶಾ ಕಾರ್ಯಕರ್ತೆಯರು ಮತ್ತು ಗ್ರಾಮಸ್ಥರು ಉಪಸ್ಥಿತರಿದ್ದರು.

## ನೆರಳುಮನೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಬಳ್ಳಾರಿ**
ಪರಿಶಿಷ್ಟ ಪಂಗಡದವರ ಅಭಿವೃದ್ಧಿಗಾಗಿ ವಿಶೇಷ ಕೇಂದ್ರಿಯ ನೆರವಿನಡಿ ಪಾಲಿಹೌಸ್/ನೆರಳುಮನೆ ಘಟಕ ಕಾರ್ಯಕ್ರಮಕ್ಕೆ ಸಹಾಯಧನ ಪಡೆಯಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.
ಜಿಲ್ಲೆಗೆ 07 ಗುರಿ ನಿಗದಿಪಡಿಸಿದ್ದು, ನಿಗದಿಪಡಿಸಿದ ಗುರಿಗೆ ತಕ್ಕಂತೆ ಅರ್ಜಿಗಳು ಬಂದಿರುವುದಿಲ್ಲ. ಆಸಕ್ತರು ಅರ್ಜಿ ಸಲ್ಲಿಸಬಹುದಾಗಿದೆ. ಸೌಲಭ್ಯ ಪಡೆಯಲಿಚ್ಛಿಸುವ ಆಸಕ್ತರು ಪರಿಶಿಷ್ಟ ಪಂಗಡದವರು ಷರತ್ತುಗಳಿಗೊಳಪಟ್ಟು ಡಿ.31ರೊಳಗಾಗಿ ಅರ್ಜಿಯನ್ನು ಜಿಲ್ಲಾ ಹಾಗೂ ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು.
**ಷರತ್ತುಗಳು:** ಅರ್ಜಿದಾರರು ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ವಯಸ್ಸು 18 ರಿಂದ 60ವರ್ಷಗಳ ಒಳಗಿರಬೇಕು. ಫಲಾನುಭವಿಗಳ ವಾರ್ಷಿಕ ಆದಾಯ ರೂ. 1.50 ಲಕ್ಷ ಒಳಗಿರಬೇಕು. ಅರ್ಜಿದಾರರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರು ಸರ್ಕಾರಿ ನೌಕರಿಯಲ್ಲಿರಬಾರದು. ಅರ್ಜಿದಾರರಾಗಲೀ, ಕುಟುಂಬದ ಸದಸ್ಯರಾಗಲಿ ನಿಗಮದ ಯಾವುದೇ ಯೋಜನೆಯಡಿ ಈ ಹಿಂದೆ ಸೌಲಭ್ಯ ಪಡೆದಿರಬಾರದು. ಘಟಕ ಸದುಪಯೋಗ ಪಡಿಸಿಕೊಳ್ಳುವ ಬಗ್ಗೆ ಪ್ರಮಾಣ ಪತ್ರ/ಮುಚ್ಚಳಿಕೆ ಪತ್ರ ನೀಡಬೇಕು. ಬಿಪಿಎಲ್ ಕಾರ್ಡ್ ಮತ್ತು ಆಧಾರ್ ಕಾರ್ಡ್ ಹೊಂದಿರಬೇಕು ಮತ್ತು ಸ್ವಂತ ವ್ಯವಸಾಯ ಭೂಮಿ ಹೊಂದಿರಬೇಕು. ಹೆಚ್ಚಿನ ಮಾಹಿತಿಗಾಗಿ ನಗರದ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನದ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ ಹಾಗೂ ದೂ.08392-219190 ಗೆ ಸಂಪರ್ಕಿಸಬಹುದು.

## ಪೊಲೀಸ್ ಹುದ್ದೆಗಳ ಲಿಖಿತ ಪರೀಕ್ಷೆ ಡಿ.10ಕ್ಕೆ

**ಹಂಪಿ ಟೈಮ್ಸ್ ಹೊಸಪೇಟೆ**
ಪೊಲೀಸ್‌ಕಾನ್ಸ್‌ಟೇಬಲ್ ಹುದ್ದೆಗಳಿಗಾಗಿ ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳು ಡಿ.10ರಂದು ನಡೆಯುವ ಲಿಖಿತ ಪರೀಕ್ಷೆಗೆ ಹಾಜರಾಗುವಂತೆಜಿಲ್ಲಾ ಪೊಲೀಸ್‌ಅಧೀಕ್ಷಕ ಶ್ರೀಹರಿಬಾಬು ಬಿ.ಎಲ್‌ಅವರು ತಿಳಿಸಿದ್ದಾರೆ.



ಕರ್ನಾಟಕರಾಜ್ಯಪೊಲೀಸ್‌ಇಲಾಖೆಯಲ್ಲಿ ಖಾಲಿ ಇರುವಕಲ್ಯಾಣಕರ್ನಾಟಕ ಪ್ರದೇಶದ ಪೊಲೀಸ್‌ಕಾನ್ಸ್‌ಟೇಬಲ್ (ಸಿವಿಲ್) (ಪುರುಷ, ಮಹಿಳಾ ಹಾಗೂ ತೃತೀಯ ಲಿಂಗ) ಹಾಗೂ ಸೇವಾನಿರತ& ಬ್ಯಾಕ್‌ಲಾಗ್-454 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಡಿ.10ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಬೆಂಗಳೂರು ನಗರ, ಚಿತ್ರದುರ್ಗ, ದಾವಣಗೆರೆ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಾಗೂ ಕಲ್ಯಾಣಕರ್ನಾಟಕ ಭಾಗದ ಬೀದರ್, ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಪರೀಕ್ಷಾ ಕೇಂದ್ರಗಳಲ್ಲಿ ನಡೆಸಲಾಗುವುದು.
ಈ ಲಿಖಿತ ಪರೀಕ್ಷೆಗೆಅರ್ಹರಿರುವ ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಎಸ್.ಎಂ.ಎಸ್ ಮೂಲಕ ಮಾಹಿತಿಯನ್ನು ಹಾಗೂ ಕರೆಪತ್ರದ ಲಿಂಕ ಅನ್ನು ಸಹ ಕಳುಹಿಸಲಾಗಿದ್ದು, ಅಭ್ಯರ್ಥಿಗಳು ಕರೆಪತ್ರ ವನ್ನುಡೌನ್‌ಲೋಡ್ ಮಾಡಿಕೊಂಡು ನಿಗದಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಬೇಕು.

## ನಕಲಿ ವೈದ್ಯರ ಕ್ಲಿನಿಕ್‌ಗಳ ಮೇಲೆ ದಾಳಿ

**ವೈದ್ಯ ಪದವಿ ಪಡೆಯದವರಿಂದ ಹೈ ಡೋಸ್ ಇಂಜಕ್ಷನ್ ನೀಡಿಕೆ | ರೋಗಿಗಳ ಮೇಲೆ ಗಂಭೀರ ಪರಿಣಾಮ**
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ ರಮೇಶ್ ಬಾಬು ಹೇಳಿಕೆ | ಕ್ಲಿನಿಕ್ ಸೀಜ್, ಜಪ್ತು**

**ಹಂಪಿ ಟೈಮ್ಸ್ ಬಳ್ಳಾರಿ**
ವೈದ್ಯರೆಂದು ಹೇಳಿಕೊಂಡು ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿದ್ದ ನಗರದ ಕೌಲ್‌ಬಜಾರ್‌ನ ಬೆಳಗಲ್ ಕ್ರಾಸ್ ಹತ್ತಿರ ನಾಗೇಂದ್ರ ಎನ್ನುವವರು ನಡೆಸುತ್ತಿದ್ದ ಮಹಾಸತಿ ಥೆರಫಿ ಸೆಂಟರ್, ಶೇಕರ್ ಬಿಸ್ವಾಸ್ ಎನ್ನುವವರು ಮಿಲ್ಲರ್‌ಪೇಟೆಯ ಮುಲ್ಲಂಗಿ ಸ್ಟ್ರೀಟ್‌ನಲ್ಲಿ ನಡೆಸುತ್ತಿದ್ದ ಪೈಲ್ಸ್ (ಮೂಲವ್ಯಾಧಿ) ಕ್ಲಿನಿಕ್ ಹಾಗೂ ಕೊರ್ಲಗುಂದಿ ಗ್ರಾಮದ ರವಿ ಎನ್ನುವವರ ಕ್ಲಿನಿಕ್‌ಗಳ ಮೇಲೆ ಗುರುವಾರ ದಾಳಿ ನಡೆಸಿ, ನಿಖರ ದಾಖಲೆ ಇಲ್ಲದಿರುವುದು ಮತ್ತು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ-2007, 2009ರ ಅಡಿಯಲ್ಲಿ ನೋಂದಣಿ ಮಾಡಿಸದೇ ಇದುದ್ದರಿಂದ ಕ್ಲಿನಿಕ್‌ಗಳನ್ನು ಮೋಹರು ಲಗತ್ತಿಸಿ ಸೀಜ್ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ ರಮೇಶ್ ಬಾಬು ಅವರು ತಿಳಿಸಿದ್ದಾರೆ.
ವೈದ್ಯರೆಂದು ತಪ್ಪು ಮಾಹಿತಿ ನೀಡಿ ಸಾರ್ವಜನಿಕರಿಗೆ ನಂಬಿಕೆ ಬರುವಂತೆ ಮಾಡುವ ಮೂಲಕ ಚಿಕಿತ್ಸೆ ನೀಡುವ ಹಾಗೂ ಹೈ ಡೋಸ್ ಇಂಜಕ್ಷನ್‌ಗಳನ್ನು ನೀಡುವ ಮೂಲಕ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುವುದಕ್ಕೆ ಕಾರಣರಾಗುತ್ತಿದ್ದಾರೆ. ಈ ಹಿನ್ನಲೆಯಲ್ಲಿ ಸಾರ್ವಜನಿಕರು ಅಂಗೀಕೃತ ವೈದ್ಯ ಪದವಿ ಪಡೆದವರ ಹತ್ತಿರ ಮಾತ್ರ ಚಿಕಿತ್ಸೆ ಪಡೆಯಬೇಕು ಎಂದು ಹೇಳಿದ್ದಾರೆ.
ದಾಳಿ ನಡೆಸಿದ ಕ್ಲಿನಿಕ್‌ಗಳನ್ನು ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ-2007, 2009ರ ಅಡಿಯಲ್ಲಿ ಸೀಜ್ ಮಾಡಲಾಗಿದ್ದು, ವೈದ್ಯ ಪದವಿ



ಪಡೆದವರು ಆಸ್ಪತ್ರೆಗಳು ಮತ್ತು ಪ್ರಯೋಗಾಲಯಗಳು, ಕ್ಲಿನಿಕ್‌ಗಳು ಅಥವಾ ಇನ್ನಾವುದೇ ವೈದ್ಯಕೀಯ ಸೇವೆ ನೀಡುವವರು ಕಡ್ಡಾಯವಾಗಿ ನೋಂದಣಿ ಮಾಡಿಸಿ ಅನುಮತಿ ಪಡೆದುಕೊಂಡು ಕಾರ್ಯ ಆರಂಭ ಮಾಡಬೇಕು. ಒಂದು ವೇಳೆ ಅನುಮತಿ ಪಡೆಯದೆ ಆರಂಭಿಸಿದರೆ ತಕ್ಷಣ ಸ್ಥಗಿತಗೊಳಿಸಿ ಅನುಮತಿ ಪಡೆಯಬೇಕು. ಅದರಲ್ಲೂ ವೈದ್ಯರು ಅಲ್ಲದವರು ವೈದ್ಯ ವೃತ್ತಿ ಮಾಡುತ್ತಿದ್ದಲ್ಲಿ ಕಾನೂನು ರೀತಿಯಲ್ಲಿ ಎಫ್‌ಐಆರ್ ದಾಖಲಿಸಲಾಗುವುದು ಎಂದು ಎಚ್ಚರಿಸಿದ್ದಾರೆ.
ವೈದ್ಯ ವೃತ್ತಿ ಮಾಡುವವರಿಗೆ ಬಾಡಿಗೆ ಕೊಡುವಾಗ ಅಂಗಡಿ ಮತ್ತು ಮನೆಗಳ ಮಾಲಿಕರು, ಅವರ ವೈದ್ಯಕೀಯ ಪದವಿಯ ಪ್ರಮಾಣ ಪತ್ರಗಳನ್ನು ಪರಿಶೀಲಿಸಿ ಮಾಹಿತಿ ಪಡೆದು ಬಾಡಿಗೆ ನೀಡಬೇಕು. ಒಂದು ವೇಳೆ ಸೀಜ್ ಮಾಡಿದ ನಂತರ ಉಂಟಾಗುವ ಅನಾನುಕೂಲತೆಗಳಿಗೆ ತಾವೇ ಹೊಣೆಗಾರರು ಎಂದು ತಿಳಿಸಿದ್ದಾರೆ. ತಾಲ್ಲೂಕ ಆರೋಗ್ಯ ಅಧಿಕಾರಿ ಡಾ.ಅಬ್ದುಲ್ಲಾ, ಕೆಪಿಎಂಇ ತಂಡದ ಅರುಣ್ ಕುಮಾರ್, ಗೋಪಾಲ್ ಕೆ.ಹೆಚ್ ಇತರರಿದ್ದರು.




Printed by: MANJUNATHA .H .B Published by: A. SHUBHA. Owned by: A. SHUBHA and Printed at: AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA